ಸಂಪುಟ : 10 ಸಂಚಿಕೆ: 233 ಪುಟ : 4+2 ಬೆಲೆ: 3.00 ಮಂಗಳವಾರ ಅಕ್ಟೋಬರ್ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 233 Pages : 4+2 Price : 3.00 Tuesday October 28 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಲವರ್ ಜೊತೆ ಲಾಡ್ಜ್ ನಲ್ಲಿ ಸಿಕ್ಕಿಬಿದ್ದ ಗಂಡ!

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಜಿಲ್ಲೆಯ ಚಿಕ್ಕೋಡಿಯಲ್ಲಿ ವ್ಯಕ್ತಿಯೋರ್ವ ಪ್ರೇಯಸಿಯೊಂದಿಗೆ ಲಾಡ್ಜ್ ನಲ್ಲಿದ್ದಾಗಲೇ ರೆಡ್ ಹ್ಯಾಂಡ್ ಆಗಿ ಪತ್ನಿ ಕೈಗೆ ಸಿಕ್ಕಿಬಿದ್ದಿರುವ ಘಟನೆ ಜರುಗಿದೆ.

ಅವಿನಾಶ್ ಭೋಸಲೆಗೆ ಈಗಾಗಲೇ ಮದುವೆಯಾಗಿದ್ದು. ಆದರೂ ಸಹ ಪ್ರೇಯಸಿಯನ್ನು ಚಿಕ್ಕೋಡಿ ಬಸ್ ನಿಲ್ದಾಣ ಬಳಿ ಇರುವ ಲಾಡ್ಜ್ ಕರೆದೊಯ್ದಿದ್ದ. ಈ ವಿಚಾರ ತಿಳಿಯುತ್ತಿದ್ದಂತೆಯೇ ಪತ್ನಿ ನೇರವಾಗಿ ಲಾಡ್ಜ್ ಗೆ ಬಂದು ಪತಿಯನ್ನು ರಸ್ತೆಗೆ ಎಳೆದು ತಂದು ಸಾರ್ವಜನಿಕವಾಗಿ ಉಳ್ಳಾಡಿಸಿ ಚಪ್ಪಲಿಯಿಂದ ಹೊಡೆದಿದ್ದಾಳೆ.

ಈ ಘಟನೆ ಬಸ್ ನಿಲ್ದಾಣ ಹತ್ತಿರ ಇರುವ ಲಾಡ್ಜ್‌ನಲ್ಲಿ ನಡೆದಿದ್ದು, ಅಲ್ಲಿದ್ದವರು ದೃಶ್ಯಗಳನ್ನು ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿದ್ದು, ಅದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪ್ರಕರಣದ ತನಿಖೆ ಆರಂಭಿಸಿದ್ದಾರೆ.

## ಹೈಕಮಾಂಡ್ ಒಪ್ಪಿದರೇ ನಾನೇ ಪೂರ್ಣಾವಧಿ ಸಿಎಂ ಎಂದ ಸಿದ್ದು: ಅವರು ಹೇಳಿದ್ಮೇಲೆ ಇನ್ನೇನಿದೆ? ಎಂದ ಡಿಕೆಶಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಹೈಕಮಾಂಡ್ ಒಪ್ಪಿದರೇ ನಾನೇ ಪೂರ್ಣಾವಧಿ ಸಿಎಂ ಎಂಬ ಸಿದ್ದರಾಮಯ್ಯ ಹೇಳಿಕೆಗೆ ಡಿಸಿಎಂ ಡಿಕೆ ಶಿವಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಸಿಎಂ ಹೇಳಿದ್ಮೇಲೆ ಇನ್ನೇನಿದೆ? ಅವ್ರು ಹೇಗೆ ಹೇಳುತ್ತಾರೋ ಹಾಗೆ ನಡೆಯುತ್ತೇವೆ ಎಂದರು.

ಇನ್ನು ದೆಹಲಿ ಭೇಟಿ ಬಗ್ಗೆ ಮಾತನಾಡಿದ ಅವರು, ನಮ್ಮ ಪಕ್ಷದ ಕಾರ್ಯಕಾರಿ ಸಮಿತಿ ಸದಸ್ಯೆಯಾದ ಅಂಬಿಕಾ ಸೋನಿಯವರ ಮನೆಗೆ ಭೇಟಿ ನೀಡಿದ್ದೆ. ಅವರ ಪತಿ ತೀರಿಕೊಂಡಿದ್ದರು. ಹೀಗಾಗಿ ಸಂತಾಪ ಸೂಚಿಸಲು ಅವರ ಮನೆಗೆ ಭೇಟಿ ನೀಡಿದ್ದೆ. ನಾನು ತಿಹಾರ್ ಜೈಲಿನಲ್ಲಿದ್ದಾಗ ಅವರು ಸೋನಿಯಾಗಾಂಧಿ ಅವರ ಜೊತೆ ಬಂದು ನನ್ನನ್ನು ಭೇಟಿ ಮಾಡಿದ್ದರು. ನನಗೂ ಅವರಿಗೂ ಬಹಳ ಆತ್ಮೀಯತೆ. ನಮ್ಮ ಪಕ್ಷದ ನಾಯಕರು ಅವರು. ಎಸ್.ಎಂ.ಕೃಷ್ಣ ಅವರು ಅಧಿಕಾರದಲ್ಲಿದ್ದಾಗ ನಮಗೆ ಪ್ರಧಾನ ಕಾರ್ಯದರ್ಶಿಯಾಗಿದ್ದರು. ನನ್ನನ್ನು ತಮ್ಮನಂತೆ ಕಂಡಿದ್ದರು. ನನ್ನ ಕೆಲಸಗಳಿಗೆ ಪ್ರೋತ್ಸಾಹ ನೀಡುತ್ತಿದ್ದರು. ಹಾಗಾಗಿ ನಾನು ಅವರ ಮನೆಗೆ ಭೇಟಿ ನೀಡಿದ್ದೆ ಎಂದು ತಿಳಿಸಿದ್ದಾರೆ.

ನೀವು ಹೈಕಮಾಂಡ್ ಭೇಟಿಗೆ ದೆಹಲಿಗೆ ಹೋಗಿದ್ದೀರಿ ಎಂದು ಚರ್ಚೆಯಾಗುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ದೆಹಲಿಗೆ ಹೋಗಿದ್ದ ವಿಷಯ, ಕೆಲಸದ ಬಗ್ಗೆ ಮಾತ್ರ ಹೇಳಬಲ್ಲೆ. ಹೈಕಮಾಂಡ್ ಭೇಟಿ ಬಗ್ಗೆ ನೀವು ಮಾಧ್ಯಮದವರು, ಸಾರ್ವಜನಿಕರು, ಇನ್ನೂ ಬೇರೆಯವರು ಏನು ಬೇಕಾದರೂ ಚರ್ಚೆ ಮಾಡಿಕೊಳ್ಳಿ. ಯಾರು ಬೇಕಾದರೂ ಮಾತಾಡಿಕೊಳ್ಳಲಿ. ನನಗದು ಸಂಬಂಧ ಪಡದ ವಿಷಯ ಎಂದಿದ್ದಾರೆ.

## ಹೃದಯ ವಿದ್ರಾವಕ ಘಟನೆ: ಮಕ್ಕಳನ್ನು ಕೊಂದು ತಾಯಿಯೂ ಆತ್ಮಹತ್ಯೆ!

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲೆಯ ಕುಕನೂರು ತಾಲೂಕಿನ ಬೆನಕಲ್ ಗ್ರಾಮದಲ್ಲಿ ಇಬ್ಬರು ಮಕ್ಕಳನ್ನ ಕೊಂದು ತಾಯಿಯೂ ಆತ್ಮಹತ್ಯೆಗೆ ಶರಣಾದ ಹೃದಯ ವಿದ್ರಾವಕ ಘಟನೆ ಜರುಗಿದೆ.

ರಮೇಶ್(4), ಜಾನು(2) ಮತ್ತು ತಾಯಿ ಲಕ್ಷ್ಮವ್ವ ಮೃತರು. ಸುದ್ದಿ ತಿಳಿದು ಸ್ಥಳಕ್ಕೆ ಕೊಪ್ಪಳ ಎಸ್ಪಿ ಅರಸಿದ್ದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಮಾತನಾಡಿದ ಅವರು, ಬೆಣಕಲ್ ಗ್ರಾಮದಲ್ಲಿ 30 ವರ್ಷದ ಲಕ್ಷ್ಮವ್ವ ಬಜಂತ್ರಿ ಮನೆಯಲ್ಲಿ ಯಾರೂ ಇಲ್ಲದ ವೇಳೆ ಮೊದಲು ಮಕ್ಕಳಿಗೆ ನೇಣು ಹಾಕಿದ್ದಾಳೆ. ನಂತರ ತಾನೂ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಇದುವರೆಗೂ ಯಾರು ದೂರು ಕೊಟ್ಟಿಲ್ಲ ಎಂದರು.

### 'ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ' ಕಾರ್ಯಕ್ರಮದಲ್ಲಿ ನ್ಯಾಯಾಧೀಶ ಶಿವನಗೌಡ್ರ ಅಭಿಮತ

# ಭ್ರಷ್ಟಾಚಾರದ ವಿರುದ್ಧ ಸಾರ್ವಜನಿಕರು ಜಾಗೃತರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ




ಗದಗ ಜಿಲ್ಲೆಯನ್ನು ಭ್ರಷ್ಟಾಚಾರ ಮುಕ್ತ ಜಿಲ್ಲೆಯನ್ನಾಗಿಸಲು ಜಿಲ್ಲೆಯ ಸಮಸ್ತ ಮಹಾಜನತೆ ಪ್ರಜ್ಞಾವಂತಿಕೆಯಿಂದ ಕೈಜೋಡಿಸಬೇಕೆಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡ್ರ ಹೇಳಿದರು.

ಅವರು ಸೋಮವಾರ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತ ಗದಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಗದಗ ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಆಶ್ರಯದಲ್ಲಿ ಜರುಗಿದ 'ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ಕಚೇರಿಗಳಲ್ಲಿ ಎಲ್ಲ ಅಧಿಕಾರಿಗಳೂ ಭ್ರಷ್ಟರಲ್ಲ. ಕರ್ತವ್ಯನಿಷ್ಠೆ, ಪ್ರಾಮಾಣಿಕತೆಯುಳ್ಳ ದಕ್ಷ ಅಧಿಕಾರಿಗಳೂ ಇದ್ದಾರೆ. ಭ್ರಷ್ಟ ಅಧಿಕಾರಿಗಳು ಸಾರ್ವಜನಿಕರಿಂದ ಲಂಚ ಪಡೆಯುವದು ಎಷ್ಟು ಅಪರಾಧವೋ, ಸಾರ್ವಜನಿಕರು ಅಧಿಕಾರಿಗಳಿಗೆ ಲಂಚ ಕೊಟ್ಟು ತಮ್ಮ ಕೆಲಸ ಮಾಡಿಸಿಕೊಳ್ಳುವದು ಕೂಡ ಭ್ರಷ್ಟಾಚಾರಕ್ಕೆ ಪುಷ್ಠಿ ನೀಡಿದಂತೆ ಎಂದರು.

ಭ್ರಷ್ಟಾಚಾರ ಅಪರಾಧ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷಿ-ಪುರಾವೆ ಒದಗಿಸುವವರು ಹೆದರುವ ಅಗತ್ಯವಿಲ್ಲ. ನಿರ್ಭಿಡೆಯಿಂದ, ಧೈರ್ಯದಿಂದ ಮುಂದೆ ಬರಬೇಕು. ಇಂತಹ ವ್ಯಕ್ತಿಗಳಿಗೆ ಕಾನೂನು ಭದ್ರತೆ ಇದೆ. ಆದ್ದರಿಂದ ಧೈರ್ಯದಿಂದ ಬದುಕಿ, ನ್ಯಾಯಯುತವಾಗಿ ಬದುಕಿ ಎಂದರು.

> ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ನ್ಯಾಯಯುತ ಕೆಲಸ ಸೌಲಭ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ವಿಳಂಬ ನೀತಿ ಅನುಸರಿಸಿದರೆ, ತಾರತಮ್ಯ ಮಾಡಿದರೆ, ಕೆಲಸ ಮಾಡಿಕೊಡಲು ಲಂಚದ ಹಣಕ್ಕೆ ಬೇಡಿಕೆ ಇಟ್ಟಲ್ಲಿ ಮತ್ತು ಅಧಿಕಾರಿಗಳು ಅಕ್ರಮ ಆಸ್ತಿಗಳನ್ನು ಹೊಂದಿದ್ದರೆ, ಸರ್ಕಾರದ ಹಣ ದುರುಪಯೋಗ ಆಗುವಂತಹ ಪ್ರಕರಣಗಳು ಕಂಡು ಬಂದಲ್ಲಿ ಲೋಕಾಯುಕ್ತಕ್ಕೆ ತಿಳಿಸಬೇಕು.
>
> – ವಿಜಯ ಬಿರಾದಾರ.
> ಗದಗ ಲೋಕಾಯುಕ್ತ ಡಿಎಸ್ಪಿ.

ಪ್ರಜ್ಞಾವಂತರು ಸೇರಿದಂತೆ ಜನಸಾಮಾನ್ಯರೂ ಕೂಡ ಭ್ರಷ್ಟಾಚಾರದ ವಿರುದ್ಧ ಜಾಗೃತರಾಗಬೇಕು. ವ್ಯವಸ್ಥೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಸರ್ವ ಜನತೆ ಪ್ರಜ್ಞಾವಂತಿಕೆಯಿಂದ ಮುಂದೆ ಬರಬೇಕು. ಅನ್ಯಾಯ, ಶೋಷಣೆಗೆ ಒಳಗಾದವರಿಗೆ ನ್ಯಾಯ ದೊರೆಯಬೇಕು. ಅಗತ್ಯವಿದ್ದವರಿಗೆ ಅವರ ಸ್ಥಿತಿಯನ್ನು ಅರಿತು ಉಚಿತ ಕಾನೂನು ಸೇವೆ ನೀಡಿ ನ್ಯಾಯ ಒದಗಿಸಲು ಅವಕಾಶವಿದ್ದು, ಸಾರ್ವಜನಿಕರು ಕಾನೂನು ಸೇವೆಗಳ ಪ್ರಾಧಿಕಾರದ ಸೇವೆಯನ್ನು ಪಡೆಯಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ, ಗದಗ ಜಿಲ್ಲಾ ಲೋಕಾಯುಕ್ತ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮೂಲಕ ಗದಗ ಜಿಲ್ಲೆಯಲ್ಲಿ ಭ್ರಷ್ಟಾಚಾರ ನಿರ್ಮೂಲನೆಗೊಳ್ಳಲು ಸಾರ್ವಜನಿಕರೂ ಸಹಕಾರ ನೀಡಬೇಕು. ಭ್ರಷ್ಟ ವ್ಯವಸ್ಥೆಯು ಸ್ವಚ್ಛಂದ ಆಡಳಿತವಾಗಿ ರೂಪುಗೊಳ್ಳಲು ಸರ್ವ ಮಹಾಜನತೆ ಪ್ರಜ್ಞಾವಂತಿಕೆಯಿಂದ ▸▸ 3ನೇ ಪುಟಕ್ಕೆ

### ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

# ಎಲ್&ಟಿ ಕಂಪನಿ ವಿರುದ್ಧ ಕಾನೂನು ಕ್ರಮ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಮತ್ತು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಎಲ್&ಟಿ ಕಂಪನಿಯು ಕಾಲಮಿತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುತ್ತಿಲ್ಲ. ಇದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿದ್ದು, ಸರ್ಕಾರಕ್ಕೂ ತೃಪ್ತಿ ಇಲ್ಲ. ಸಾಕಷ್ಟು ಬಾರಿ ಸಲಹೆ-ಸೂಚನೆಗಳನ್ನು ನೀಡಿದರೂ ಸುಧಾರಿಸದ ಈ ಕಂಪನಿ ವಿರುದ್ಧ ಮೊಕದ್ದಮೆ ಹೂಡಿ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್.ಲಾಡ್ ಹೇಳಿದರು.

ಅವರು ಸೋಮವಾರ ಮಧ್ಯಾಹ್ನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ 2025-26ನೇ ಸಾಲಿನ 2ನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಂದಿನ 15 ದಿನಗಳಲ್ಲಿ ಎಲ್&ಟಿ ಕಂಪನಿಯ ಅಧಿಕಾರಿಗಳು ಮತ್ತು ಸರ್ಕಾರದ ಕಾರ್ಯದರ್ಶಿಗಳ ಮಟ್ಟದಲ್ಲಿ ಸಭೆ ಜರುಗಿಸಿ, ಮುಂದಿನ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ವಿ.ಪ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ ಮಾತನಾಡಿ, ಪ್ರಗತಿ ಪರಿಶೀಲನಾ ಸಭೆಗೆ ಬರುವ ಮೊದಲು ಅಧಿಕಾರಿಗಳು ಸರಿಯಾದ ಮಾಹಿತಿಯನ್ನು ತರಬೇಕು. ಕೆಡಿಪಿ ಸಭೆಯು ಮಹತ್ವದ್ದಾಗಿರುವದರಿಂದ ಇಲಾಖಾವಾರು ಪ್ರಗತಿ ಪರಿಶೀಲನೆ, ಅನುದಾನ ಬಳಕೆ ಮತ್ತು ಯೋಜನೆ, ಕಾಮಗಾರಿಗಳ ಅನುಷ್ಠಾನದಲ್ಲಿ ಎದುರಿಸುವ ಸಮಸ್ಯೆಗಳ ಕುರಿತು ಚರ್ಚಿಸಲಾಗುತ್ತದೆ. ಇವುಗಳಿಗೆ ಸರ್ಕಾರದ ಮಟ್ಟದಲ್ಲಿ ಪರಿಹಾರ ಕಾಣಲು ಪ್ರಯತ್ನಿಸಲಾಗುತ್ತದೆ ಎಂದರು.

ಶಾಸಕ ಮಹೇಶ ಟೆಂಗಿನಕಾಯಿ ಮಾತನಾಡಿ, ತಾಂಡಾ ಅಭಿವೃದ್ಧಿ ನಿಗಮದಿಂದ ಫಲಾನುಭವಿಗಳಿಗೆ ಕಾಲಮಿತಿಯಲ್ಲಿ ಸೌಲಭ್ಯಗಳನ್ನು ಪೂರೈಸುತ್ತಿಲ್ಲ. ಈ ಕುರಿತು ಅಧಿಕಾರಿಗಳು ಕ್ರಮವಹಿಸಬೇಕು ಎಂದರು. ಕುಂದಗೋಳ ಶಾಸಕ ಎಂ.ಆರ್. ಪಾಟೀಲ, ವಿ.ಪ ಸದಸ್ಯ ಎಫ್.ಹೆಚ್. ಜಕ್ಕಪ್ಪನವರ, ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಲಾಯಿತು. ವೇದಿಕೆಯಲ್ಲಿ ವಿ.ಪ ಸದಸ್ಯ ಪ್ರದೀಪ ಶೆಟ್ಟರ, ಹು-ಧಾ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಇದ್ದರು.

> ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ಜಿಲ್ಲೆಯಲ್ಲಿ ಅತಿಯಾದ ಹಾಗೂ ನಿರಂತರ ಮಳೆಯಿಂದಾಗಿ ಈ ಬಾರಿ ಹೆಸರು, ಗೋವಿನಜೋಳ, ಶೇಂಗಾ ಸೇರಿದಂತೆ ವಿವಿಧ ಬೆಳೆಗಳು ಹಾನಿಯಾಗಿವೆ. ಅವೈಜ್ಞಾನಿಕವಾಗಿ ರಾಸಾಯನಿಕ ಗೊಬ್ಬರ ಬಳಸುವ ಕುರಿತು ರೈತರಲ್ಲಿ ಜಾಗೃತಿ ಮೂಡಿಸಬೇಕು. ಕೃಷಿ ಇಲಾಖೆಯ ಅಧಿಕಾರಿಗಳು ಈ ನಿಟ್ಟಿನಲ್ಲಿ ಕ್ರಮವಹಿಸಬೇಕೆಂದು ಹೇಳಿದರು.

## ಶ್ರೀ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಡಂಬಳ ನಾಕಾದಲ್ಲಿ ಗದಗ ಜಿಲ್ಲಾ ವಾಲ್ಮೀಕಿ ನಾಯಕ ಸೇವಾ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಶ್ರೀ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವವನ್ನು ಕಾನೂನು, ಸಂಸದೀಯ ವ್ಯವಹಾರ, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲ ಉದ್ಘಾಟಿಸಿದರು.

ಇದೇ ಸಂದರ್ಭದಲಿ ಚಾಲುಕ್ಯ ಮಲ್ಲಕಂಬ ಅಕಾಡೆಮಿಯಿಂದ ಮಲ್ಲಕಂಬ ಪ್ರದರ್ಶನ ನೆರವೇರಿತು. ಅಕಾಡೆಮಿಯ ಸಂಸ್ಥಾಪಕ ಹಾಗೂ ತರಬೇತುದಾರರಾದ ವಿಜಯ ಎಂ ಅವರನ್ನು ಹಾಗೂ ಮಲ್ಲಕಂಬ ಕ್ರೀಡಾಪಟುಗಳನ್ನು ರೋಣ ಶಾಸಕರಾದ ಜಿ.ಎಸ್. ಪಾಟೀಲ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಫಕ್ಕೀರೇಶ್ವರ ಮಹಾಸ್ವಾಮಿಗಳು ಶಿರಹಟ್ಟಿ, ವಾಲ್ಮೀಕಿ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬೆಳಧಡಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ನಗರಸಭೆ ಸದಸ್ಯರಾದ ಲಕ್ಷ್ಮೀ ಅನಿಲ ಸಿದ್ದಮ್ಮನಹಳ್ಳಿ, ವಸಂತ ಸಿದ್ದಮ್ಮನಹಳ್ಳಿ, ಬಸವರಾಜ ಕಡೇಮನಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಐ.ಎಸ್. ಪಾಟೀಲ ಸೇರಿದಂತೆ ವಾಲ್ಮೀಕಿ ಸೇವಾ ಸಂಘದ ಪದಾಧಿಕಾರಿಗಳು, ಸಮಾಜದ ಹಿರಿಯರು, ಮುಖಂಡರು ಉಪಸ್ಥಿತರಿದ್ದರು.

## ಪ್ರಚೋದನಕಾರಿ ಭಾಷಣ ಆರೋಪ: ಕಲ್ಲಡ್ಕ ಪ್ರಭಾಕರ ಭಟ್ ವಿರುದ್ಧ ಬಲವಂತದ ಕ್ರಮ ಬೇಡ ಎಂದ ಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಮಂಗಳೂರು

ಪ್ರಚೋದನಕಾರಿ ಭಾಷಣ ಮಾಡಿದ ಆರೋಪದಡಿ ದಾಖಲಾಗಿದ್ದ ಕೇಸ್ ಗೆ ಸಂಬಂಧಿಸಿದಂತೆ ಕಲ್ಲಡ್ಕ ಪ್ರಭಾಕರ ಭಟ್ ವಿರುದ್ಧ ಬಲವಂತದ ಕ್ರಮ ಬೇಡ ಎಂದು ಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಪ್ರಚೋದನಕಾರಿ ಭಾಷಣ ಆರೋಪದಡಿ ಆರ್ ಎಸ್ ಎಸ್ ಪ್ರಮುಖ ಕಲ್ಲಡ್ಕ ಪ್ರಭಾಕರ ಭಟ್ ವಿರುದ್ಧ ದಾಖಲಾಗಿರುವ ಈಖಖ ವಿಚಾರವಾಗಿ ಬಲವಂತದ ಕ್ರಮಕೈಗೊಳ್ಳದಂತೆ ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರಿನ 6ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್ ಆದೇಶಿಸಿದೆ. ಮುಂದಿನ ವಿಚಾರಣೆವರೆಗೆ ಬಂಧನ ಸೇರಿದಂತೆ ಬಲವಂತದ ಕ್ರಮ ಬೇಡ ಎಂದು ನ್ಯಾಯಾಲಯ ತಿಳಿಸಿದ್ದು, ವಿಚಾರಣೆಯನ್ನು ಅ.29ಕ್ಕೆ ಕೋರ್ಟ್ ಮುಂದೂಡಿದೆ.

ಕಳೆದ ಅ.20ರಂದು ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರಿನ ಉಪ್ಪಳಿಗೆಯಲ್ಲಿ ನಡೆದ ದೀಪೋತ್ಸವ ಕಾರ್ಯಕ್ರಮದಲ್ಲಿ ಪ್ರಭಾಕರ್ ಭಟ್ ಭಾಷಣ ಮಾಡಿದ್ದರು. ಅವರು ಧಾರ್ಮಿಕ ದ್ವೇಷ ಪ್ರಚೋದಿಸುವ, ಮಹಿಳೆಯರ ಘನತೆಗೆ ಧಕ್ಕೆ ತರುವ ರೀತಿ ಮಾತನಾಡಿದ್ದಾರೆ ಎಂದು ಆರೋಪಿಸಿ ಈಶ್ವರಿ ಪದ್ಮುಂಜ ಎಂಬುವರು ನೀಡಿದ್ದ ದೂರಿನ ಅನ್ವಯ ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿತ್ತು.

ಬಿಎನ್ಎಸ್ 79, 196, 299, 302, 3(5) ಅಡಿ ಕಲ್ಲಡ್ಕ ಪ್ರಭಾಕರ ಭಟ್ ಮತ್ತು ಕಾರ್ಯಕ್ರಮ ಆಯೋಜಕರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು. ಅ. 30ರಂದು ವಿಚಾರಣೆಗೆ ಹಾಜರಾಗುವಂತೆ ಕಲ್ಲಡ್ಕ ಪ್ರಭಾಕರ ಭಟ್ ಅವರಿಗೆ ನೋಟಿಸ್ ನೀಡಲಾಗಿತ್ತು. ಇದನ್ನ ಪ್ರಶ್ನಿಸಿ ಪ್ರಭಾಕರ್ ಭಟ್ ಕೋರ್ಟ್ ಮೊರೆ ಹೋಗಿದ್ದರು. ಇದೀಗ ಕೋರ್ಟ್ ಕಲ್ಲಡ್ಕ ಪ್ರಭಾಕರ ಭಟ್ ಗೆ ಬಿಗ್ ರಿಲೀಫ್ ನೀಡಿದೆ.

## ನೋಂದಣಿಗೆ ಅನಧಿಕೃತ ಹಣ ಪಡೆಯದಿರಿ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೆಂಬಲ ಬೆಲೆ ಯೋಜನೆಯಡಿ ಕಾಳು ಖರೀದಿಸಲು ರೈತರಿಂದ ನೋಂದಣಿ ಕೇಂದ್ರಗಳಲ್ಲಿ ಅನಧಿಕೃತವಾಗಿ ಹಣ ವಸೂಲು ಮಾಡುತ್ತಿರುವ ಬಗ್ಗೆ ದೂರು ಬಂದಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಇದನ್ನು ಗಂಭೀರವಾಗಿ ಪರಿಗಣಿಸಿದ್ದು, ಉಚಿತ ನೋಂದಣಿಗೆ ಹಣ ಪಡೆದರೆ ಕಾನೂನಾತ್ಮಕವಾಗಿ ಕ್ರಮ ಕೈಗೊಳ್ಳುದಾಗಿ ಎಚ್ಚರಿಕೆ ನೀಡಿದ್ದಾರೆ. ದೂರು ಬಂದ ಹಿನ್ನೆಲೆಯಲ್ಲಿ ಧಾರವಾಡ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ಅವರು ಸೋಮವಾರ ಬೆಳಿಗ್ಗೆ ಉಪ್ಪಿನಬೆಟಗೇರಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಭೇಟಿ ನೀಡಿ, ಪರಿಶೀಲಿಸಿದರು.

ಉಪ್ಪಿನಬೆಟಗೇರಿಯ ಕೃಷಿ ಪ್ರಾಥಮಿಕ ಪತ್ತಿನ ಸಹಕಾರ ಸಂಘದಲ್ಲಿ ಬೀಜ, ಗೊಬ್ಬರ ಮಾರಾಟ ಹಾಗೂ ಕೃಷಿ ಉತ್ಪನ್ನ ಖರೀದಿ ಕೇಂದ್ರದಲ್ಲಿ ಹೆಚ್ಚುವರಿ ಹಣ ವಸೂಲಿ ಬಗ್ಗೆ ಪರಿಶೀಲಿಸಿ, ಸಭೆ ಜರುಗಿಸಿದರು.

ಕೃ.ಪ.ಸ ಸಂಘದ ಅಭಿವೃದ್ಧಿ ನಿಧಿ ಹಾಗೂ ಕಟ್ಟಡ ಭವಿಷ್ಯತ್ ನಿಧಿಗೆ 100 ಹೆಚ್ಚುವರಿ ಶುಲ್ಕ ವಿಧಿಸಿ ರಶೀದಿ ನೀಡಿದ್ದು, ಇದಕ್ಕೆ ಆಕ್ಷೇಪಣೆ ಬಂದ ಹಿನ್ನೆಲೆಯಲ್ಲಿ ಇನ್ನು ಮುಂದೆ ಹೆಚ್ಚುವರಿ ಶುಲ್ಕ ತೆಗೆದುಕೊಳ್ಳುವುದನ್ನು ಈ ಕೂಡಲೇ ನಿಲ್ಲಿಸುವದಾಗಿ ಸಹಕಾರಿ ಸಂಘದ ಕಾರ್ಯದರ್ಶಿ ಹಾಗೂ ಅಧ್ಯಕ್ಷರು, ಸದಸ್ಯರು ತಿಳಿಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರಾಜಶೇಖರ ಅನಗೌಡರ, ಅಮ್ಮಿನಭಾವಿ ಕಂದಾಯ ನಿರೀಕ್ಷಕ ಗುರು ಒಡೆಯರ, ಸೊಸೈಟಿಯ ಸದಸ್ಯರು ಹಾಗೂ ರೈತರು ಇದ್ದರು.

## ಶ್ರೀ ಸಹಸ್ರಾರ್ಜುನ ಮಹಾರಾಜರ ಭಕ್ತಿ ಗೀತೆ



ಜಯ ಜಯ ಜಯ ಸಹಸ್ರಾರ್ಜುನದೇವಾ
ಜಯ ಜಯ ಧರ್ಮದ ದೀಪಾ
ನಿನ್ನ ಕೀರ್ತಿ ಹಾದಿ ಬೆಳಕು ನಿನ್ನಾಶೀರ್ವಾದ
ನಮಗೆ ಕೃಪಾ ॥ ಪಲ್ಲವಿ ॥

ಮಹಾಲಕ್ಷ್ಮೀ ಮಹಾವಿಷ್ಣು ವಂಶದ ಜ್ಯೋತಿ ನೀನು
ದತ್ತಾತ್ರೇಯ ಗುರುದೇವರ ಆಶೀರ್ವಾದದಾತನು
ಶಿವಲಿಂಗ ಸ್ಥಾಪಿಸಿ ಶಿವನ ಪೂಜಿಸಿದ ಶಿವ ಆರಾಧಕನು
ಸತ್ಯಧರ್ಮ ಶಾಂತಿಯ ದೀಪ ಶಕ್ತಿ ಪೂಜಕನು ॥ 1 ॥

ಸಾವಿರಾರು ಯಜ್ಞ ಮಾಡಿದ ಯಜ್ಞರಾಜ ನೀನು
ಮುತ್ತು ರತ್ನ ವಜ್ರ ವೈಢೂರ್ಯ ದಾನ ಮಾಡಿದವನು
ವೈಕುಂಠದಿಂದ ಭುವಿಗಿಳಿದು ಬಂದ ದೇವಮಾನವನು
ಧರ್ಮದ ಧ್ವಜ ಎತ್ತಿ ಹಿಡಿದ ಪುಣ್ಯಪಾತ್ರ ಭಾನು ॥ 2 ॥

ಭಕ್ತ ಜನರ ಮನದಲಿ ಇಂದು ಉತ್ಸವವಯ್ಯ
ನಿನ್ನ ಪಾದಸ್ಮರಣೆ ಸಕಲ ಸೌಭಾಗ್ಯವಯ್ಯ
ಮಂಗಳನಾದ ಮೂಡಲಿ ಎಲ್ಲರ ಮನದಲ್ಲಿ
ಪೂರ್ವಜರ ಆಶೀರ್ವಾದ ಹರಿಯಲಿ ನಮಗೆಲ್ಲ ಇಲ್ಲಿ
॥ 3 ॥

ಸತ್ಯ ನಮ್ಮ ಉಸಿರು, ಧರ್ಮ ನಮ್ಮ ದೇವರು
ಶಾಂತಿ ನಮ್ಮ ತವರು, ನಿನ್ನನಾಮ ನಮ್ಮ ಉಸಿರು
ಸಹಸ್ರಾರ್ಜುನ ರಾಜಾ, ನಿನ್ನ ಕೀರ್ತಿ ಗಗನ
ನಿನ್ನ ಆಶೀರ್ವಾದದಿ ಬೆಳಗಲಿ ನಿತ್ಯ ಭವನ ॥ 4 ॥

– ಡಾ. ಆರ್.ಎಚ್. ಕಬಾಡಿ.

### ಮಾರನಬಸರಿ ಬಸ್ ನಿಲ್ದಾಣಕ್ಕೆ ಚನ್ನು ಪಾಟೀಲ ಫೌಂಡೇಶನ್‌ನಿಂದ ಬಣ್ಣ

# ಎಲ್ಲವನ್ನೂ ಸರಕಾರವೇ ಮಾಡಲಿ ಎಂದರಾಗದು



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ
ಸಮೀಪದ ಮಾರನಬಸರಿ ಗ್ರಾಮದ ಬಸ್ ನಿಲ್ದಾಣವು ಬಣ್ಣವನ್ನು ಕಂಡು ಅದೆಷ್ಟೋ ವರ್ಷಗಳಾಗಿದ್ದವು. ಹೀಗಾಗಿ ಬಸ್ ನಿಲ್ದಾಣ ಅತ್ಯಂತ ಕುರೂಪಿಯಾಗಿ ಕಾಣುತ್ತಿತ್ತು. ಇದನ್ನು ಕಂಡ ಹಿರೇಅಳಗುಂಡಿಯ ಚನ್ನು ಪಾಟೀಲ ಫೌಂಡೇಷನ್‌ನ ಉಮೇಶ ಪಾಟೀಲ ಬಸ್ ನಿಲ್ದಾಣಕ್ಕೆ ಫೌಂಡೇಷನ್ ವತಿಯಿಂದ ಬಣ್ಣ ಹಚ್ಚಿಸುವುದರ ಮೂಲಕ ಅದಕ್ಕೊಂದು ಮೆರುಗನ್ನು ನೀಡಿದ್ದಾರೆ. ಇದರಿಂದ ಈಗ ಬಸ್ ನಿಲ್ದಾಣವು ಅತ್ಯಂತ ಸುಂದರವಾಗಿ ಗೋಚರಿಸುತ್ತಿದೆ.

ಇದಕ್ಕೂ ಮೊದಲು ಬಸ್ ನಿಲ್ದಾಣವು ಕಸ-ಕಡ್ಡಿಗಳಿಂದ, ಬೇಡವಾದ ವಸ್ತುಗಳಿಂದ ಸಂಗ್ರಹಗೊಂಡು ಪ್ರಯಾಣಿಕರು ಅದರಲ್ಲಿ ಕೂರಲು ಅಸಾಧ್ಯ ಎಂಬಂತಾಗಿತ್ತು. ಇದನ್ನು ಕಣ್ಣಾರೆ ಕಂಡ ಚನ್ನು ಪಾಟೀಲ ಫೌಂಡೇಷನ್ ಕಾರ್ಯಕರ್ತರು ಅದಕ್ಕೊಂದು ಕಾಯಕಲ್ಪವನ್ನು ನೀಡಬೇಕೆಂದು ನಿರ್ಧರಿಸಿ, ಬಸ್ ನಿಲ್ದಾಣವನ್ನು ಸ್ವಚ್ಛಗೊಳಿಸುವ ಕಾರ್ಯವನ್ನು ಕೈಗೊಂಡರು. ಪರ ಊರಿನವರು ತಮ್ಮೂರಿನ ಬಸ್ ನಿಲ್ದಾಣದ ಸ್ವಚ್ಛತೆಯ ಬಗ್ಗೆ ಅಕ್ಕರತೆ ತೋರುತ್ತಿರುವುದನ್ನು ಕಂಡು ಮಾರನಬಸರಿಯ ಗ್ರಾಮಸ್ಥರೂ ಸಹ ಚನ್ನು ಪಾಟೀಲ ಫೌಂಡೇಷನ್ ಅಡಿಯಲ್ಲಿ ನಡೆಯುತ್ತಿದ್ದ ಸ್ವಚ್ಛತಾ ಕೆಲಸಕ್ಕೆ ಕೈಜೋಡಿಸಿದರು.

ಬಸ್ ನಿಲ್ದಾಣವನ್ನು ಬರೀ ಸ್ವಚ್ಛಗೊಳಿಸಿದರೆ ಸಾಲದು. ಅದು ಇನ್ನಷ್ಟು ಅಂದವಾಗಿ ಕಾಣುವಂತೆ ಮಾಡಬೇಕೆಂಬ ಉತ್ಕಟೇಚ್ಛೆ ಫೌಂಡೇಷನ್‌ನ ಸಂಸ್ಥಾಪಕ ಉಮೇಶ ಪಾಟೀಲರಿಗಾಯಿತು. ಅದಕ್ಕಾಗಿ ಅವರು ಬಸ್ ನಿಲ್ದಾಣಕ್ಕೆ ಬಣ್ಣ ಹಚ್ಚಿಸಲು ನಿರ್ಧರಿಸಿದರು. ಈಗ ಬಣ್ಣ ಬಳಿದುಕೊಂಡು ನಿಂತಿರುವ ಮಾರನಬಸರಿಯ ಬಸ್ ನಿಲ್ದಾಣ ನೂತನ ಮದುವಣಗಿತ್ತಿಯಂತೆ ಸುಂದರವಾಗಿ ಕಂಗೊಳಿಸುತ್ತಿದೆ. ಈ ಉತ್ತಮ ಕಾರ್ಯ ಮಾಡಿದ್ದಕ್ಕಾಗಿ ಚನ್ನು ಪಾಟೀಲ ಫೌಂಡೇಷನ್‌ನವರನ್ನು ಗ್ರಾಮಸ್ಥರು ಅಭಿನಂದಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಫೌಂಡೇಷನ್‌ದ ಸಂಸ್ಥಾಪಕ ಉಮೇಶ ಪಾಟೀಲ, ಎಲ್ಲವನ್ನೂ ಸರಕಾರವೇ ಮಾಡಲಿ ಎಂದು ಕಾಯುತ್ತ ಕುಳಿತರೆ ನಡೆಯದು. ನಮ್ಮೂರಿನ ಸರಕಾರಿ ಆಸ್ತಿಗಳು ನಮ್ಮ ಹೆಮ್ಮೆಯಾಗಬೇಕು. ನಮ್ಮೂರಿನ ಬಸ್ ನಿಲ್ದಾಣವು ಶುಚಿಯಾಗಿದ್ದರೆ, ನೋಡಲು ಅಂದವಾಗಿದ್ದರೆ ಬಸ್ ನಿಲ್ದಾಣದಲ್ಲಿ ಕೂಡ್ರಲು ಪ್ರಯಾಣಿಕರಿಗೆ ಹುರುಪು ಬರುತ್ತದೆ. ಇಲ್ಲವಾದರೆ ಅವರು ಮರದ ಕೆಳಗೋ, ಅಂಗಡಿಗಳ ಕೆಳಗೋ ನಿಂತುಕೊಳ್ಳಬೇಕಾಗುತ್ತದೆ. ಇದನ್ನು ಕಂಡೇ ಈ ಸಣ್ಣ ಪ್ರಯತ್ನವನ್ನು ಫೌಂಡೇಷನ್ ವತಿಯಿಂದ ಮಾಡಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಚಂದ್ರಕಾಂತ ಮಾರನಬಸರಿ, ಶಿವಕುಮಾರ ದೊಡ್ಡೂರು, ವಿರೂಪಾಕ್ಷಪ್ಪ ಮಾರನಬಸರಿ, ಬಸವರಾಜ ಹಡಪದ, ಅಂದಾನಗೌಡ ಪಾಯಪ್ಪಗೌಡ್ರ, ಮರ್ತುಜಾಸಾಬ ಮೋತೆಖಾನ, ಖಾದಿರಸಾಬ ಕಳಕಾಪೂರ, ಹನುಮಂತಪ್ಪ ಹಡಗಲಿ, ಬಸಪ್ಪ ಮಾದರ, ಮುತ್ತಪ್ಪ ಅಂಗಡಿ, ಲಕ್ಷ್ಮಪ್ಪ ಬಂಕದ ಮುಂತಾದವರಿದ್ದರು.

ಇನ್ನು ಮುಂದೆ ಗ್ರಾಮಸ್ಥರು ಈ ನಿಲ್ದಾಣದ ಶುಚಿತ್ವಕ್ಕೆ ಮತ್ತು ಸೌಂದರ್ಯಕ್ಕೆ ಹೆಚ್ಚಿನ ಗಮನ ನೀಡಿ ಪ್ರಯಾಣಿಸುವವರಿಗೆ ಸುಖದ ಅನುಭವ ನೀಡಬೇಕು. ಈ ಮೂಲಕ ನಾವು ನಮ್ಮ ಫೌಂಡೇಷನ್ ವತಿಯಿಂದ ಸಾರ್ವಜನಿಕ ಸ್ಥಳಗಳ ಶ್ರೇಯೋಭಿವೃದ್ಧಿಗಾಗಿ ಒಂದು ಮಹತ್ತರ ಹೆಜ್ಜೆಯನ್ನಿರಿಸಿದ್ದೇವೆ. ನಿಮ್ಮ ಸಹಕಾರ ಇರಲಿ ಎಂದು ಫೌಂಡೇಷನ್‌ನ ಸಂಸ್ಥಾಪಕ ಉಮೇಶ ಪಾಟೀಲ ಹೇಳಿದರು.




## ಮುಂದಿನ ಸಿಜೆಐ ಆಗಿ ನ್ಯಾ.ಸೂರ್ಯಕಾಂತ್ ಅವರನ್ನು ಶಿಫಾರಸು ಮಾಡಿದ ಸಿಜೆಐ ಬಿ.ಆರ್. ಗವಾಯಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ
ಭಾರತದ ಮುಖ್ಯ ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯಿ ಅವರು ಸುಪ್ರೀಂ ಕೋರ್ಟ್‌ನ ಎರಡನೇ ಅತ್ಯಂತ ಹಿರಿಯ ನ್ಯಾಯಾಧೀಶರಾದ ನ್ಯಾಯಮೂರ್ತಿ ಸೂರ್ಯಕಾಂತ್ ಅವರನ್ನು ತಮ್ಮ ಉತ್ತರಾಧಿಕಾರಿಯಾಗಿ ಶಿಫಾರಸು ಮಾಡಿದ್ದಾರೆ.

ಮುಖ್ಯ ನ್ಯಾಯಮೂರ್ತಿ ಗವಾಯಿ ಅವರು ತಮ್ಮ ಶಿಫಾರಸಿನಲ್ಲಿ ನ್ಯಾಯಮೂರ್ತಿ ಕಾಂತ್ ಅವರನ್ನು "ಚುಕ್ಕಾಣಿ ಹಿಡಿಯಲು ಎಲ್ಲಾ ಅಂಶಗಳಲ್ಲಿಯೂ ಸೂಕ್ತ ಮತ್ತು ಸಮರ್ಥ" ಎಂದು ಬಣ್ಣಿಸಿದ್ದಾರೆ, ಇಬ್ಬರೂ ಪರಿಶ್ರಮ ಮತ್ತು ಹೋರಾಟದಿಂದ ಗುರುತಿಸಲ್ಪಟ್ಟ ಒಂದೇ ರೀತಿಯ ಸಾಮಾಜಿಕ ಹಿನ್ನೆಲೆಯನ್ನು ಹಂಚಿಕೊಂಡಿರುವುದಾಗಿ ಹೇಳಿದ್ದಾರೆ" ಎಂದು ವರದಿಯಾಗಿದೆ.




ಸಿಜೆಐ ಗವಾಯಿ ಅವರ ನಂತರ ಸುಪ್ರೀಂ ಕೋರ್ಟ್‌ನ ಎರಡನೇ ಅತ್ಯಂತ ಹಿರಿಯ ನ್ಯಾಯಾಧೀಶರಾದ ನ್ಯಾಯಮೂರ್ತಿ ಸೂರ್ಯಕಾಂತ್, ನವೆಂಬರ್ 24 ರಂದು 53ನೇ ಸಿಜೆಐ ಅಧಿಕಾರ ಸ್ವೀಕರಿಸಲಿದ್ದಾರೆ. ಅದಕ್ಕೂ ಮುನ್ನ ನವೆಂಬರ್ 23ರಂದು ಹಾಲಿ ಸಿಜೆಐ ಗವಾಯಿ ನಿವೃತ್ತಿಯಾಗಲಿದ್ದಾರೆ.

ಕಳೆದ ವಾರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಹಾಲಿ ಸಿಜೆಐಗೆ ಪತ್ರ ಬರೆದು, ಮುಂದಿನ ಸಿಜೆಐ ಅನ್ನು ಶಿಫಾರಸು ಮಾಡುವಂತೆ ಕೇಳಿದ್ದರು.

ಸುಪ್ರೀಂ ಕೋರ್ಟ್ ವೆಬ್‌ಸೈಟ್ ಪ್ರಕಾರ, ನ್ಯಾಯಮೂರ್ತಿ ಕಾಂತ್ ಅವರು ಫೆಬ್ರವರಿ 10, 1962 ರಂದು ಹರಿಯಾಣದ ಹಿಸಾರ್‌ನಲ್ಲಿ ಮಧ್ಯಮ ವರ್ಗದ ಕುಟುಂಬದಲ್ಲಿ ಜನಿಸಿದರು.

## ಬೀದಿ ನಾಯಿಗಳ ಬಗ್ಗೆ ವರದಿ ಸಲ್ಲಿಸದ ರಾಜ್ಯಗಳು; ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ
ಬೀದಿ ನಾಯಿಗಳ ಹಾವಳಿಯ ಬಗ್ಗೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ನಿಷ್ಕ್ರಿಯವಾಗಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್, ಪ್ರಾಣಿಗಳ ಜನನ ನಿಯಂತ್ರಣ (ಎಬಿಸಿ) ನಿಯಮಗಳನ್ನು ಜಾರಿಗೆ ತರಲು ತೆಗೆದುಕೊಂಡ ಕ್ರಮಗಳ ಕುರಿತು ಅನುಸರಣಾ ಅಫಿಡವಿಟ್‌ಗಳನ್ನು ಸಲ್ಲಿಸಲು ವಿಫಲವಾದ ಪಶ್ಚಿಮ ಬಂಗಾಳ ಮತ್ತು ತೆಲಂಗಾಣ ಹೊರತುಪಡಿಸಿ ಎಲ್ಲ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಸೋಮವಾರ ಸಮನ್ಸ್ ಜಾರಿ ಮಾಡಿದೆ.



'ಇನ್ ರೀ: ಸಿಟಿ ಹೌಂಡೆಡ್ ಬೈ ಸ್ಟ್ರೇಸ್, ಕಿಡ್ಸ್ ಪೇ ದಿ ಪ್ರೈಸ್' ಎಂಬ ಶೀರ್ಷಿಕೆಯಡಿಯಲ್ಲಿ ಸ್ವಯಂಪ್ರೇರಿತ ಪ್ರಕರಣವನ್ನು ಆಲಿಸಿದ ನ್ಯಾಯಮೂರ್ತಿ ವಿಕ್ರಮ್ ನಾಥ್, ನ್ಯಾಯಮೂರ್ತಿ ಸಂದೀಪ್ ಮೆಹ್ತಾ ಮತ್ತು ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಅವರ ಪೀಠವು ಪಾಲಿಸದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿತು, ಬೀದಿ ನಾಯಿಗಳ ದಾಳಿಯ ಘಟನೆಗಳು 'ವಿದೇಶಿ ರಾಷ್ಟ್ರಗಳ ಮುಂದೆ ದೇಶವನ್ನು ಕೆಟ್ಟ ರೀತಿಯಲ್ಲಿ ಬಿಂಬಿಸುತ್ತಿವೆ' ಎಂದು ಗಮನಿಸಿತು.

"ನಿರಂತರ ಘಟನೆಗಳು ನಡೆಯುತ್ತಿವೆ, ವಿದೇಶಿ ರಾಷ್ಟ್ರಗಳ ದೃಷ್ಟಿಯಲ್ಲಿ ದೇಶದ ಚಿತ್ರಣವನ್ನು ಕೆಟ್ಟದಾಗಿ ತೋರಿಸಲಾಗುತ್ತಿದೆ. ನಾವು ಸುದ್ದಿ ವರದಿಗಳನ್ನು ಸಹ ಓದುತ್ತಿದ್ದೇವೆ" ಎಂದು ನ್ಯಾಯಮೂರ್ತಿ ನಾಥ್ ಟೀಕಿಸಿದರು.

### ಅ. 31ರೊಳಗಾಗಿ ನರೇಗಾ ಕೂಲಿಕಾರರು ಇ-ಕೆವೈಸಿ ಮಾಡಿಸಲು ಬಸವರಾಜ ಬಡಿಗೇರ ನಿರ್ದೇಶನ

# ಇ-ಕೆವೈಸಿ ಮಾಡಿಸದಿದ್ದರೆ ಉದ್ಯೋಗ ಖಾತ್ರಿಯಿಲ್ಲ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ
ಕೇಂದ್ರ ಸರ್ಕಾರ ನರೇಗಾ ಯೋಜನೆಯ ಕೂಲಿಕಾರರಿಗೆ ಇ-ಕೆವೈಸಿ ಕಡ್ಡಾಯಗೊಳಿಸಿದೆ. ತಾಲೂಕಿನ 13 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನರೇಗಾ ಕೂಲಿಕಾರರಿಗೆ ಇ-ಕೆವೈಸಿ ಕಾರ್ಯ ಪ್ರಗತಿಯಲ್ಲಿದ್ದು, ಮುಂದಿನ ನಾಲ್ಕು ದಿನಗಳಲ್ಲಿ ತಾಲೂಕಿನ ಎಲ್ಲ ನರೇಗಾ ಕೂಲಿಕಾರರು ಕಡ್ಡಾಯವಾಗಿ ಇ-ಕೆವೈಸಿ ಮಾಡಿಸಿಕೊಳ್ಳಬೇಕು. ಇಲ್ಲವಾದಲ್ಲಿ ನರೇಗಾ ಕೂಲಿಕಾರರ ಉದ್ಯೋಗ ಚೀಟಿ ರದ್ದುಗೊಳಿಸಲಾಗುವುದೆಂದು ತಾ.ಪಂ ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ ಹೇಳಿದರು.

ತಾಲೂಕಿನಲ್ಲಿ ಅತೀ ಕಡಿಮೆ ಇ-ಕೆವೈಸಿ ಪ್ರಗತಿ ಸಾಧಿಸಿರುವ ಹಾಲಕೆರೆ ಮತ್ತು ಮಾರನಬಸರಿ ಗ್ರಾ.ಪಂಗಳಿಗೆ ಭೇಟಿ ನೀಡಿ, ನರೇಗಾ ಕೂಲಿಕಾರರ ಮನೆ-ಮನೆಗಳಿಗೆ ತೆರಳಿ ಈ ಬಗ್ಗೆ ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ಹಾಲಕೆರೆ ಗ್ರಾ.ಪಂಗೆ ಭೇಟಿ ನೀಡಿ ಇ-ಕೆವೈಸಿ ಕಾರ್ಯ ಪರಿಶೀಲಿಸಿದ ಬಸವರಾಜ ಬಡಿಗೇರ ಖುದ್ದು ಗ್ರಾಮದಲ್ಲಿ ಸಂಚರಿಸಿ ಕೂಲಿಕಾರರ ಮನೆಗಳಿಗೆ ಭೇಟಿ ನೀಡಿ ಇ-ಕೆವೈಸಿ ಕಾರ್ಯ ಮಾಡಿದರು. ಈ ವೇಳೆ ಗ್ರಾಮಸ್ಥರ ಜೊತೆ ಸಮಾಲೋಚನೆ ನಡೆಸಿದ ಅವರು, ಅಕ್ಟೋಬರ್ 31ರೊಳಗಾಗಿ ಇ-ಕೆವೈಸಿ ಮಾಡಿಸಿಕೊಳ್ಳಬೇಕು. ಇಲ್ಲವೇ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಬರುವುದಿಲ್ಲ ಎಂದರು.

ಮಾರನಬಸರಿ ಗ್ರಾ.ಪಂಗೆ ಭೇಟಿ ನೀಡಿ ಇ-ಕೆವೈಸಿ ಮಾಡುತ್ತಿರುವ ಸಿಬ್ಬಂದಿಗಳ ಜೊತೆ ಮಾತನಾಡಿ, ಬೆಳಿಗ್ಗೆ ಮತ್ತು ಸಾಯಂಕಾಲ ಸಂದರ್ಭದಲ್ಲಿ ನೆಟ್‌ವರ್ಕ್ ಸಮಸ್ಯೆ ಇರುವುದಿಲ್ಲ. ಈ ವೇಳೆ ಗ್ರಾಮದ ಸಾರ್ವಜನಿಕ ಸ್ಥಳದಲ್ಲಿ ಕೂಲಿಕಾರರನ್ನು ಸೇರಿಸಿಕೊಂಡು ಇ-ಕೆವೈಸಿ ಕಾರ್ಯ ಮಾಡಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕಿನ ಎಲ್ಲ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಗಣಕಯಂತ್ರ ನಿರ್ವಾಹಕರು, ನರೇಗಾ ಯೋಜನೆಯ ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಎಂಐಎಸ್ ಸಂಯೋಜಕರು, ಬಿಎಫ್‌ಟಿ, ಗ್ರಾಮ ಕಾಯಕ ಮಿತ್ರರು ಹಾಜರಿದ್ದರು.

ಗಜೇಂದ್ರಗಡ ತಾಲೂಕಿನಲ್ಲಿ ಒಟ್ಟು 37307 ನರೇಗಾ ಕೂಲಿಕಾರರಿದ್ದು, ಈವರೆಗೂ 18198 ನರೇಗಾ ಕೂಲಿಕಾರರ ಇ-ಕೆವೈಸಿ ಕಾರ್ಯ ಪೂರ್ಣಗೊಂಡಿದೆ.

ಇನ್ನೂ 19109 ನರೇಗಾ ಕೂಲಿಕಾರರ ಇ-ಕೆವೈಸಿ ಕಾರ್ಯ ಉಳಿದುಕೊಂಡಿದ್ದು, ಮುಂದಿನ ನಾಲ್ಕು ದಿನಗಳಲ್ಲಿ ಮುಕ್ತಾಯಗೊಳಿಸುವಂತೆ ಸಂಬಂಧಿಸಿದ ಸಿಬ್ಬಂದಿಗಳಿಗೆ ವರ್ಚುವಲ್ ಸಭೆ ಮೂಲಕ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ತಾಕೀತು ಮಾಡಿದ್ದಾರೆ.

# ಅಲೆಮಾರಿಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ
ಪಟ್ಟಣದ ದೊಡ್ಡೂರ ರಸ್ತೆಯಲ್ಲಿನ ಅಲೆಮಾರಿ-ಗುಡಿಸಲು ನಿವಾಸಿಗಳಿಗೆ ಆಶ್ರಯ, ಅಗತ್ಯ ದಾಖಲೆ, ಸೌಲಭ್ಯ ಕಲ್ಪಿಸುವಂತೆ ಸೋಮವಾರ ತಾಲೂಕಾ ಪಂಚಾಯಿತಿಯಲ್ಲಿ ನಡೆದ ಸಭೆಯಲ್ಲಿ ಶಾಸಕರಿಗೆ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿದ ಶಾಸಕ ಡಾ. ಚಂದ್ರು ಲಮಾಣಿ, ಲಕ್ಷ್ಮೇಶ್ವರ ಸೇರಿ ಶಿರಹಟ್ಟಿ ಮತಕ್ಷೇತ್ರದಾದ್ಯಂತ ಇರುವ ಅಲೆಮಾರಿ ಜನಾಂಗದವರಿಗೆ ಶಾಶ್ವತ ನೆಲೆ ಕಲ್ಪಿಸುವ ಮೂಲಕ ಅಲೆಮಾರಿ ಪಟ್ಟ ಕಳಚಬೇಕಿದೆ. ಅದಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳು ಈ ಕುಟುಂಬಗಳಿಗೆ ಆಧಾರ್ ಕಾರ್ಡ್, ಜಾತಿ/ಆದಾಯ ಪ್ರಮಾಣಪತ್ರ, ಜನ್ಮದಿನಾಂಕ, ರೇಶನ್ ಕಾರ್ಡ್ ಸೇರಿ ಕಾನೂನಾತ್ಮಕವಾಗಿ ಅಗತ್ಯ ದಾಖಲೆ, ಸೌಲಭ್ಯ ಕಲ್ಪಿಸಬೇಕು. ದಾಖಲೆಗಳು ಇಲ್ಲದ್ದರಿಂದ ಸರ್ಕಾರದ ಸೌಲಭ್ಯದಿಂದ ವಂಚಿತರಾಗುತ್ತಿದ್ದಾರೆ. ಅದಕ್ಕಾಗಿ ಕಚೇರಿಗಳಿಗೆ ಅಲೆದು ನೊಂದಿದ್ದಾರೆ.

ಅಲೆಮಾರಿಗಳೂ ನಮ್ಮೆಲ್ಲರಂತೆ ಮನುಷ್ಯರೇ. ಅವರಿಗೂ ಎಲ್ಲರಂತೆ ಬದುಕುವ ಭದ್ರತೆ, ಹಕ್ಕು, ಸೌಲಭ್ಯ ಕಲ್ಪಿಸಿಕೊಡಬೇಕು. ಕಳೆದ ಅನೇಕ ವರ್ಷಗಳಿಂದ ಪಟ್ಟಣ ಸೇರಿ ಅನೇಕ ಕಡೆ ಸಣ್ಣ ಪುಟ್ಟ ವ್ಯಾಪಾರ-ಉದ್ಯೋಗ ಮಾಡಿಕೊಂಡು ರಸ್ತೆ ಬದಿಯ ಜೋಪಡಿಯಲ್ಲಿಯೇ ಹತ್ತಾರು ವರ್ಷಗಳಿಂದ ಜೀವನ ಸಾಗಿಸುತ್ತಿದ್ದಾರೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಪೂರಕ ದಾಖಲೆ ಹೊಂದಿದ ಎಲ್ಲರಿಗೂ ಆಶ್ರಯ ಯೋಜನೆಯಡಿ ನಿವೇಶನ, ಮನೆ ನಿರ್ಮಾಣಕ್ಕೆ ಸರ್ಕಾರದ ಸಹಾಯಧನ ಕಲ್ಪಿಸಿಕೊಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಈ ವೇಳೆ ತಹಸೀಲ್ದಾರ ರಾಘವೇಂದ್ರ ಕುಲಕರ್ಣಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ರಾಮಣ್ಣ ದೊಡ್ಡಮನಿ, ಜೆ.ಎ. ಮನಿಯಾರ, ಅಲೆಮಾರಿ ನಿವಾಸಿಗಳಾದ ಅಣ್ಣಪ್ಪ ಶಿರಹಟ್ಟಿ, ಕಲ್ಲಪ್ಪ ರಾಣೇಬೆನ್ನೂರ ಸೇರಿ ಹಲವರಿದ್ದರು.

## ಒತ್ತುವರಿ ತೆರವುಗೊಳಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ
ಪಟ್ಟಣದ ಬಸ್ತಿಬಣದ ಉಮಚಗಿ ಓಣಿಯಲ್ಲಿನ ಗೌರಿಗುಡಿಯ ಸುತ್ತಲಿನ ಸರ್ಕಾರದ ಜಾಗೆ, ರಸ್ತೆ ಒತ್ತುವರಿಯಾಗಿದ್ದು, ಪುರಸಭೆಯವರು ಒತ್ತುವರಿ ತೆರವುಗೊಳಿಸಿ ಈ ಭಾಗದ ಜನರಿಗೆ ಅನಕೂಲ ಕಲ್ಪಿಸಬೇಕು ಎಂದು ನಿವಾಸಿಗಳು ಸೋಮವಾರ ಪುರಸಭೆಗೆ ಮನವಿ ಸಲ್ಲಿಸಿದರು.

ಗೌರಿ ಗುಡಿಯ ಸುತ್ತಲಿನ ಸರ್ಕಾರಿ ಜಾಗೆ, ರಸ್ತೆಯನ್ನು ಕೆಲವರು ಒತ್ತುವರಿ ಮಾಡಿಕೊಂಡು ಸ್ವಂತಕ್ಕೆ ಬಳಸಿಕೊಳ್ಳುತ್ತಿದ್ದಾರೆ. ಇದರಿಂದ ಸುತ್ತಮುತ್ತಲಿನ ಜನರ ಧಾರ್ಮಿಕ, ಸಾಮಾಜಿಕ ಮತ್ತು ಸಾಮೂಹಿಕ ಬಳಕೆಗೆ, ಸಂಚಾರಕ್ಕೆ ತೊಂದರೆಯಾಗಿದೆ. ಒತ್ತುವರಿ ತೆರವು ವಿಚಾರದಲ್ಲಿ ನೆರೆ-ಹೊರೆಯವರೊಂದಿಗೆ ನಿತ್ಯ ಮನಸ್ತಾಪ, ಕಿರಿಕಿರಿ ಉಂಟಾಗುತ್ತಿದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಸಮಕ್ಷಮ ಬಂದು ಪರಿಶೀಲಿಸಿ, ಒತ್ತುವರಿ ತೆರವು ಮಾಡಿಸಬೇಕು ಎಂದು ಮನವಿ ಸಲ್ಲಿಸಿದರು.

ಈ ವೇಳೆ ಗಿರಿಜವ್ವ ಉಮಚಗಿ, ಸೋಮವ್ವ ಅಣ್ಣಿಗೇರಿ, ಅಕ್ಕಮ್ಮ ಶಿರೋಳ, ಸವಿತಾ ಇಟ್ಟಿಗೇರಿ, ಗಂಗಮ್ಮ ಬೊಮ್ಮನಹಳ್ಳಿ ಸೇರಿ ಓಣಿಯ ಮಹಿಳೆಯರು, ಮುಖಂಡರು ಇದ್ದರು. ಪುರಸಭೆ ಅಧಿಕಾರಿ ಮಂಜುಳಾ ಹೂಗಾರ ಮನವಿ ಸ್ವೀಕರಿಸಿದರು.

# ಕೊಟ್ಟೂರುಸ್ವಾಮಿ ಐಟಿಐನಲ್ಲಿ ಘಟಿಕೋತ್ಸವ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ
ಪಟ್ಟಣದ ಶ್ರೀ ಕೊಟ್ಟೂರುಸ್ವಾಮಿ ಐಟಿಐಯಲ್ಲಿ ತರಬೇತಿ ಮುಗಿಸಿದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಾಚಾರ್ಯ ಬಸವೇಶ ಜೋಳದ, ನೀವು ಕಲಿತ ವಿದ್ಯೆಯನ್ನು ಸಮಾಜಕ್ಕೆ ಸಮರ್ಪಕವಾಗಿ ಉಪಯೋಗಿಸಿ. ನಿಮ್ಮಲ್ಲಿನ ಕೌಶಲ್ಯವನ್ನು ತೋರುವ ಮೂಲಕ ಉತ್ತಮ ತಂತ್ರಜ್ಞರು ಎಂಬುದನ್ನು ಸಾಬೀತುಪಡಿಸಿ. ಇಲ್ಲಿ ಕಲಿತ ವಿದ್ಯೆಯಷ್ಟೇ ನಿಮಗೆ ಸಾಲದು. ನಿಮ್ಮದೇ ಆದ ಶೈಲಿಯನ್ನು ಬಳಸಿಕೊಂಡು ಜೀವನದಲ್ಲಿ ಉನ್ನತ ಸ್ಥಾನವನ್ನು ಪಡೆಯಿರಿ ಎಂದರು.

ಐಟಿಐ ಕಲಿತ ವಿದ್ಯಾರ್ಥಿಗಳಿಗೆ ಈಗ ವಿಫುಲ ಅವಕಾಶಗಳಿವೆ. ಅವುಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ನೀವು ನಿಮ್ಮ ಸಾಮರ್ಥ್ಯವನ್ನು, ಕೌಶಲ್ಯವನ್ನು ಸಾಬೀತುಪಡಿಸುತ್ತ ಹೋದಂತೆ ನಿಮ್ಮ ವೇತನದಲ್ಲಿಯೂ ಹೆಚ್ಚಳವಾಗಿ ನೀವೊಬ್ಬ ಉತ್ತಮ ತಂತ್ರಜ್ಞ ಎಂಬ ಹೆಸರನ್ನು ಪಡೆಯಲು ಅನುಕೂಲವಾಗುತ್ತದೆ ಎಂದರು.



ಉಪನ್ಯಾಸಕ ಶ್ರೀಧರ ಕಮ್ಮಾರ ಮಾತನಾಡಿ, ಗ್ರಾಮೀಣ ವಿದ್ಯಾರ್ಥಿಗಳಲ್ಲಿಯೂ ತಂತ್ರಜ್ಞರ ಕೌಶಲ್ಯತೆ ಬರಲಿ ಎಂದು ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರು ಈ ಸಂಸ್ಥೆಯನ್ನು ಸ್ಥಾಪಿಸಿದ್ದಾರೆ. ಇಂದು ತಮ್ಮ 32ನೇ ಜನ್ಮೋತ್ಸವವನ್ನು ಆಚರಿಸಿಕೊಳ್ಳುತ್ತಿರುವ ಇಂದಿನ ಪೀಠಾಧಿಪತಿಗಳಾದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ತಮ್ಮ ಗುರುಗಳು ಹಾಕಿಕೊಟ್ಟ ದಾರಿಯಲ್ಲಿ ನಡೆಯುತ್ತ, ಈ ಸಂಸ್ಥೆಯ ಅಭಿವೃದ್ಧಿಗೆ ಸಾಕಷ್ಟು ಯೋಜನೆಗಳನ್ನು ಹಾಕಿಕೊಂಡಿದ್ದಾರೆ. ಅವರೀರ್ವರ ಸದಾಶೀರ್ವಾದ ಯಾವಾಗಲೂ ನಿಮ್ಮ ಮೇಲೆ ಇರುವುದರಿಂದ ನೀವು ಜೀವನದಲ್ಲಿ ಉನ್ನತ ಸ್ಥಾನ ಪಡೆಯುತ್ತೀರಿ ಎಂದು ಆಶಿಸಿದರು.

ತರಬೇತಿ ಪೂರೈಸಿದ ವಿದ್ಯಾರ್ಥಿಗಳಿಗೆಲ್ಲ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಡಿ.ಎ. ಪಾಟೀಲ ಸ್ವಾಗತಿಸಿದರು. ನಾಗರಾಜ ಗುಡದಾರಿ ವಂದಿಸಿದರು.

## 12 ರಾಜ್ಯಗಳಲ್ಲಿ ಎರಡನೇ ಹಂತದ ಮತದಾರರ ಪಟ್ಟಿ ಪರಿಷ್ಕರಣೆ: ಚುನಾವಣಾ ಆಯೋಗ




■ವಿಜಯಸಾಕ್ಷಿ ಸುದ್ದಿ, ನವದೆಹಲಿ

12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್)ನ ಎರಡನೇ ಹಂತವನ್ನು ನಡೆಸಲಾಗುವುದು ಎಂದು ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಸೋಮವಾರ ಘೋಷಿಸಿದರು.

ದ್ ಹ್ ಲಿ ೦ ು ್ ು ಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕುಮಾರ್, "ಇಂದು ನಾವು ವಿಶೇಷ ತೀವ್ರ ಪರಿಷ್ಕರಣೆಯ ಎರಡನೇ ಹಂತದ ಬಿಡುಗಡೆಗೆ ಸಂಬಂಧಿಸಿದಂತೆ ಇಲ್ಲಿದ್ದೇವೆ. ಬಿಹಾರದ ಮತದಾರರಿಗೆ ನನ್ನ ಶುಭಾಶಯಗಳನ್ನು ಸಲ್ಲಿಸುತ್ತೇನೆ, ಯಶಸ್ವಿ ಎಸ್‌ಐಆರ್‌ನಲ್ಲಿ ಭಾಗವಹಿಸಿದ 7.5 ಕೋಟಿ ಮತದಾರರ ಮುಂದೆ ನಮಸ್ಕರಿಸುತ್ತೇನೆ. ಆಯೋಗವು ಎಲ್ಲ 36 ರಾಜ್ಯಗಳ ಚುನಾವಣಾ ಅಧಿಕಾರಿಗಳನ್ನು ಭೇಟಿ ಮಾಡಿ ಪ್ರಕ್ರಿಯೆಯ ಬಗ್ಗೆ ವಿವರವಾಗಿ ಚರ್ಚಿಸಿದೆ" ಎಂದರು.

ಬಿಹಾರದಲ್ಲಿ ಮೊದಲ ಹಂತ ಯಶಸ್ವಿ ಬಿಹಾರದಲ್ಲಿ ನಡೆಸಲಾದ ಎಸ್‌ಐಆರ್‌ನ ಮೊದಲ ಹಂತವು 90,000 ಕ್ಕೂ ಹೆಚ್ಚು ಮತಗಟ್ಟೆಗಳನ್ನು ಒಳಗೊಂಡಿದೆ, ಶೂನ್ಯ ಮೇಲ್ಮನವಿಗಳೊಂದಿಗೆ ಯಶಸ್ವಿಯಾಗಿ ಪೂರ್ಣಗೊಂಡಿದೆ ಎಂದು ಕುಮಾರ್ ಹೇಳಿದರು.

### ಕನ್ನಡ ರಾಜ್ಯೋತ್ಸವ ಆಚರಿಸುವ ಕುರಿತು ತಹಸೀಲ್ದಾರ ಕಚೇರಿಯಲ್ಲಿ ಪೂರ್ವಭಾವಿ ಸಭೆ

# ರಾಜ್ಯೋತ್ಸವವನ್ನು ವ್ಯವಸ್ಥಿತವಾಗಿ ಆಚರಿಸೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ತಾಲೂಕು ಆಡಳಿತದ ವತಿಯಿಂದ ಅರ್ಥಪೂರ್ಣ ಮತ್ತು ವ್ಯವಸ್ಥಿತವಾಗಿ ಆಚರಿಸೋಣ ಎಂದು ತಾ.ಪಂ ಇಓ ಕೃಷ್ಣಪ್ಪ ಧರ್ಮರ ಹಾಗೂ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಹೇಳಿದರು.

ಅವರು ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಸೋಮವಾರ ಕನ್ನಡ ರಾಜ್ಯೋತ್ಸವ ಆಚರಿಸುವ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳು, ಕನ್ನಡಪರ ಸಂಘಟನೆಗಳೊಂದಿಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ನ. 1ರಂದು ತಾಲೂಕಿನ ಎಲ್ಲ ಸರ್ಕಾರಿ ಕಚೇರಿ, ಶಾಲಾ-ಕಾಲೇಜುಗಳಲ್ಲಿ ಮುಂಜಾನೆ 8.30ರೊಳಗಾಗಿ ಭುವನೇಶ್ವರಿತಾಯಿಯ ಭಾವಚಿತ್ರದ ಪೂಜೆಯನ್ನು ಪೂರೈಸಿ, ನಂತರ 9 ಗಂಟೆಗೆ ಪುರಸಭೆ ಉಮಾ ವಿದ್ಯಾಲಯ ಮೈದಾನದಲ್ಲಿ ತಾಲೂಕಾಡಳಿತದ ವತಿಯಿಂದ ನಡೆಯುವ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ನಂತರ ಸಭಾ ಕಾರ್ಯಕ್ರಮ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ನಿರ್ಧರಿಸಲಾಗಿದ್ದು, ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಕನ್ನಡಪರ ಸಂಘಟನೆಗಳು, ಹಾಗೂ ಶಿಕ್ಷಕರು ಪಾಲ್ಗೊಂಡು ಅಚ್ಚುಕಟ್ಟಾಗಿ ನಿರ್ವಹಿಸಲು ಸಹಕರಿಸಬೇಕು.

ವೇದಿಕೆ ವ್ಯವಸ್ಥೆ, ನಾಡಗೀತೆ, ರೈತಗೀತೆ ಕಾರ್ಯಕ್ರಮಗಳನ್ನು ನಿರ್ವಹಿಸಲು ಪ್ರತ್ಯೇಕವಾದ ತಂಡಗಳು ವಿಶೇಷ ಆಸಕ್ತಿಯಿಂದ ಭಾಗವಹಿಸಬೇಕು. ಎಲ್ಲರೂ ಸೇರಿ ನಾಡ ಹಬ್ಬವನ್ನು ಸಂಭ್ರಮದಿಂದ, ವ್ಯವಸ್ಥಿತವಾಗಿ ಆಚರಿಸೋಣ, ಯಾವುದೇ ಇಲಾಖೆಯವರು, ಗೈರು ಹಾಜರಾಗುವಂತಿಲ್ಲ ಎಂದು ಹೇಳಿದರು.

ಈ ಸಮಯದಲ್ಲಿ ಹಾಜರಿದ್ದ ಕನ್ನಡಪರ ಸಂಘಟನೆಗಳ ಮುಖಂಡರಾದ ಲೋಕೇಶ ಸುತಾರ, ಮಂಜುನಾಥ ಗಾಂಜಿ ಮಾತನಾಡಿ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಚಲನಚಿತ್ರಗೀತೆಗಳಿಗೆ ನೃತ್ಯ ಸಂಯೋಜನೆ ಬೇಡ, ಕನ್ನಡ ನೆಲ, ಜಲ, ಭಾಷೆ ಸಂಸ್ಕೃತಿ ಬಿಂಬಿಸುವ ನೃತ್ಯಗಳು ಇರಲಿ. ವೇದಿಕೆ ಕನ್ನಡತನವನ್ನು ಬಿಂಬಿಸುವಂತಿರಲಿ ಎಂದು ಸಲಹೆ ನೀಡಿದರು.

ಸಭೆಯಲ್ಲಿ ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಶಿರಸ್ತೇದಾರ ಜಮೀರ ಮನಿಯಾರ, ಅಧೀಕ್ಷಕಿ ರೇಣುಕಾ ಶಿರಹಟ್ಟಿ, ಶಂಬುಲಿಂಗಪ್ಪ ನೆಗಳೂರ, ಸಿಆರ್‌ಪಿ ಸತೀಶ ಬೋಮಲೆ, ಕಂದಾಯ ಅಧಿಕಾರಿ ಎಂ.ಎ. ನಧಾಪ್, ಕಾರ್ಮಿಕ ಇಲಾಖೆಯ ರಾಣಿ ಪಾಟೀಲ, ಅರಣ್ಯ ಇಲಾಖೆಯ ಮಂಜುನಾಥ ಚವ್ಹಾಣ, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಚಂದ್ರು ಹಂಪಣ್ಣವರ, ಮಂಜುನಾಥ ಗಾಂಜಿ, ಇಲಿಯಾಸ್ ಮೀರಾನವರ, ಸಾಹೇಬಲಾಲ್ ಕಲೆಗಾರ, ಶ್ರೇಯಾಂಕ ಹಿರೇಮಠ, ಪ್ರವೀಣ ಗಾಣಿಗೇರ, ಎಎಸ್‌ಐ ಮಟ್ಟಿ ಮುಂತಾದವರು ಹಾಜರಿದ್ದು ಸಲಹೆ-ಸೂಚನೆ ನೀಡಿದರು.



ಕಸಾಪ ತಾಲೂಕಾಧ್ಯಕ್ಷ, ಶಿಕ್ಷಕ ಈಶ್ವರ ಮೇಡ್ಲೇರಿ ಮಾತನಾಡಿ, ಕನ್ನಡ ನಾಡಗೀತೆ ಜಾರಿಗೆ ಬಂದು ನೂರು ವರ್ಷವಾಗುತ್ತಿರುವ ಈ ಸಂದರ್ಭದಲ್ಲಿ ತಾಲೂಕಿನ ಹೈಸ್ಕೂಲ್ ವಿದ್ಯಾರ್ಥಿಗಳಿಗೆ ಗುಂಪು ನಾಡಗೀತೆ ಸ್ಪರ್ಧೆಯನ್ನು ಏರ್ಪಡಿಸಿದ್ದು, ನಾಡಗೀತೆಯನ್ನು ಅಚ್ಚುಕಟ್ಟಾಗಿ ಪ್ರಸ್ತುತಪಡಿಸುವ ಗುಂಪಿಗೆ ಪ್ರಥಮ, ದ್ವಿತಿಯ ಹಾಗೂ ತೃತಿಯ ಬಹುಮಾನಗಳನ್ನು ನ. 1ರಂದು ನಡೆಯುವ ಕಾರ್ಯಕ್ರಮದಲ್ಲಿ ನೀಡಲಾಗುವದು. ಎಲ್ಲ ಸಂಘಟನೆಗಳ ಸಹಯೋಗದೊಂದಿಗೆ ತಾಲೂಕಾಡಳಿತದಿಂದ ಅದ್ದೂರಿಯಾಗಿ ರಾಜ್ಯೋತ್ಸವ ಆಚರಣೆ ಮಾಡೋಣ ಎಂದರು.

## ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಆದ್ಯತೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮತಕ್ಷೇತ್ರದಲ್ಲಿ ವಾಸಿಸುತ್ತಿರುವ ಅಲೆಮಾರಿ ಜನಾಂಗವನ್ನು ಮುಖ್ಯವಾಹಿನಿಗೆ ತರಲು ಆದ್ಯತೆ ನೀಡಲಾಗುವುದು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶಿರಹಟ್ಟಿ ಪಟ್ಟಣದ ಛಬ್ಬಿ ರಸ್ತೆ ಪಕ್ಕದಲ್ಲಿ ವಾಸಿಸುತ್ತಿರುವ ಅಲೆಮಾರಿ ಜನಾಂಗದವರಿಗೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ ತಾಡಪಲ್ ವಿತರಿಸಿ ಮಾತನಾಡಿದರು.

ದಶಕಗಳ ಕಾಲದಿಂದಲೂ ಸಮರ್ಪಕ ಮೂಲಸೌಕರ್ಯ ಸಿಗದೇ ಅತ್ತಿಂದಿತ್ತ ಸಂಚರಿಸುತ್ತಿರುವ ಅಲೆಮಾರಿ ಜನಾಂಗಕ್ಕೆ ನಿಗಮದಿಂದ ಲಭ್ಯವಾಗುವ ಎಲ್ಲ ಸೌಲಭ್ಯಗಳನ್ನು ತಲುಪಿಸುವುದಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವೆ. ಈ ನಿಟ್ಟಿನಲ್ಲಿ ಈಗಾಗಲೇ ಅಲೆಮಾರಿ ಜನಾಂಗದವರು ನಿವೇಶನವನ್ನು ಕಲ್ಪಿಸುವುದಕ್ಕೆ ಮನವಿಯನ್ನು ಸಲ್ಲಿಸಿದ್ದು, ಆ ಪ್ರಯುಕ್ತ ನಾನು ಕೂಡಾ ಅಲೆಮಾರಿ ಜನಾಂಗದ ಅಭಿವೃದ್ಧಿ ನಿಗಮಕ್ಕೆ ಅರ್ಹ ಅಭ್ಯರ್ಥಿಗಳನ್ನು ಗುರುತಿಸಿ ನಿವೇಶನಗಳನ್ನು ಹಂಚಿಕೆ ಮಾಡುವಂತೆ ಒತ್ತಾಯ ಮಾಡಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಶಿರಹಟ್ಟಿ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಜಾನು ಲಮಾಣಿ, ಪ.ಪಂ ಸದಸ್ಯ ಸಂದೀಪ ಕಪ್ಪತ್ತನವರ, ಪರಶುರಾಮ ಡೊಂಕಬಳ್ಳಿ, ರಾಮಣ್ಣ ಕಂಬಳಿ, ಬಸವರಾಜ ಮಾದರ, ಸಮಾಜ ಕಲ್ಯಾಣ ಇಲಾಖೆಯ ಎಸ್.ವಿ. ಸಂಕನೂರ, ತಿಪ್ಪಣ್ಣ ಲಮಾಣಿ, ಮಲ್ಲಿಕಾರ್ಜುನ ಕಬಾಡಿ ಮುಂತಾದವರು ಉಪಸ್ಥಿತರಿದ್ದರು.



ಹಿರಿಯ ಶಿಕ್ಷಣ ತಜ್ಞರಾದ ಡಾ. ಆರ್.ಎಂ. ಕುಬೇರಪ್ಪನವರ ಅಭಿಮಾನಿ ಬಳಗದಿಂದ ನಗರದ ವಿವಿಧ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಮುಂಬರುವ ಪಶ್ಚಿಮ ಪದವೀಧರ ಮತಕ್ಷೇತ್ರದ ಮತದಾರರ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಯುವ ಶೈಕ್ಷಣಿಕ ಹೋರಾಟಗಾರರಾದ ಡಾ. ಹನುಮಂತಗೌಡ ಆರ್.ಕಲ್ಮನಿಯವರು ಪದವೀಧರ ಮತದಾರರಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಎಂ.ವಿ. ದೇಸಾಯಿಗೌಡ್ರ, ಎಂ. ಶರಣು, ಈರಣ್ಣಾ ಗಾಣಿಗೇರ, ಕೆ. ಬೆಂತೂರ, ಡಾ. ವಿ. ಮುಳಗುಂದ, ಎಂ.ಕೆ. ಜಟ್ಟೆಣ್ಣವರ ಉಪಸ್ಥಿತರಿದ್ದರು.

## ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಚರ್ಚ್ ಬಳಿ ಡೆತ್‌ನೋಟ್ ಬರೆದಿಟ್ಟು ತಿಪ್ಪಣ್ಣ ಚಂದ್ರಪ್ಪ ವಡ್ಡರ ಎಂಬಾತ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ.

ಯಾವುದೋ ವಿಷಯದಲ್ಲಿ ತನ್ನ ಗಂಡ ಬೇಜಾರು ಮಾಡಿಕೊಂಡು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಆತ್ಮಹತ್ಯೆಗೂ ಪೂರ್ವದಲ್ಲಿ ಇವರ ಬಗ್ಗೆ ಒಂದು ಬಿಳಿ ಹಾಳೆಯಲ್ಲಿ ತನ್ನ ಸಾವಿಗೆ ಕಾರಣರಾದ ಇಬ್ಬರು ಆರೋಪಿಗಳ ಹೆಸರನ್ನು ಬರೆದಿಟ್ಟು ಅ.26ರ ರಾತ್ರಿ 8.30ರಿಂದ ಅ.27ರ ಬೆಳಗಿನ ಜಾವದ ನಡುವಿನ ಅವಧಿಯಲ್ಲಿ ಚರ್ಚ್ ಸ್ಟೇರ್‌ಕೇಸ್ ಹತ್ತಿರ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಮೃತನ ಪತ್ನಿ ದೂರು ಸಲ್ಲಿಸಿದ್ದಾರೆ. ಪಿಎಸ್‌ಐ ಈರಪ್ಪ ರಿತ್ತಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಂಡಿದ್ದಾರೆ.

## ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಭಾಗಿಯಾಗಿದ್ದ ಡಾ. ಶ್ರೀಧರ್; ಯಶಸ್ವಿನಿ ಟ್ರಸ್ಟ್‌ನಿಂದ ಹೆಸರು ಕೈಬಿಟ್ಟ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಷ್ಟ್ರೀಯ ಸ್ವಯಂ ಸೇವಕ ಸಂಘದ (ಆರ್‌ಎಸ್‌ಎಸ್) ಪಥಸಂಚಲನದಲ್ಲಿ ಗಣವಸ್ತ್ರ ಧರಿಸಿ ಭಾಗಿಯಾಗಿದ್ದ ತಿಪಟೂರಿನ ವೈದ್ಯ ಶ್ರೀಧರ್ ಹೆಸರನ್ನು ಸರ್ಕಾರದ 'ಯಶಸ್ವಿನಿ ಟ್ರಸ್ಟ್'ನಿಂದ ತೆಗೆದುಹಾಕಲಾಗಿದೆ. ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಭಾಗಿಯಾಗಿದ್ದ ವೈದ್ಯರಿಗೆ ಟ್ರಸ್ಟಿಯಾಗಿ ನೇಮಿಸಲಾಗಿತ್ತು; ಇದಕ್ಕೆ ತೀವ್ರ ವಿರೋಧ ವ್ಯಕ್ತವಾಗಿತ್ತು.

ಇದು ಕಾಂಗ್ರೆಸ್ ಪಕ್ಷವು ಹೊಂದಿರುವ ಕೋಮುವಾದಿ ವಿರೋಧಿ ಮತ್ತು ಸಾಮರಸ್ಯ ನೀತಿಗೆ ವಿರುದ್ಧವಾಗಿದೆ. ತಕ್ಷಣವೇ ಡಾ. ಶ್ರೀಧರ್ ಅವರನ್ನು ಟ್ರಸ್ಟಿಯಾಗಿ ನೇಮಿಸಿ ಹೊರಡಿಸಿರುವ ಸುತ್ತೋಲೆಯನ್ನು ಹಿಂಪಡೆಯಬೇಕು ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸಿ.ಬಿ ಶಶಿಧರ್ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಒತ್ತಾಯಿಸಿದ್ದರು.

ತೀವ್ರ ವಿರೋಧಗಳ ಬೆನ್ನಲ್ಲೇ ಯಶಸ್ವಿನಿ ಟ್ರಸ್ಟ್‌ನ ಟ್ರಸ್ಟಿ ಸ್ಥಾನದಿಂದ ವೈದ್ಯ ಶ್ರೀಧರ್ ಹೆಸರನ್ನು ಕೈಬಿಡಲಾಗಿದೆ. ಈ ಸಂಬಂಧ ಸರ್ಕಾರ ಆದೇಶವನ್ನು ಹೊರಡಿಸಿದ್ದು, "ಆಡಳಿತಾತ್ಮಕ ದೃಷ್ಟಿಯಿಂದ ಈ ಹಿಂದಿನ ಆದೇಶವನ್ನು ಮಾರ್ಪಡಿಸಿ, ಡಾ. ಶೀಧರ್ ಅವರ ಹೆಸರನ್ನು ಕೈಬಿಡಲಾಗಿದೆ" ಎಂದು ತಿಳಿಸಿದೆ.

ಈ ಹಿಂದಿನ ಆದೇಶ ಖಂಡಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಶಶಿಧರ್, "ಅಕ್ಟೋಬರ್ 12ರಂದು ತುಮಕೂರು ಜಿಲ್ಲೆಯ ತಿಪಟೂರಿನಲ್ಲಿ ಆರ್‌ಎಸ್‌ಎಸ್ ಪಥಸಂಚಲನ ಆಯೋಜಿಸಿತ್ತು. ಆ ಕಾರ್ಯಕ್ರಮದಲ್ಲಿ ಕುಮಾರ್ ಆಸ್ಪತ್ರೆಯ ಡಾ. ಶ್ರೀಧರ್ ಅವರು ಗಣವೇಶ ಧರಿಸಿ ಭಾಗಿಯಾಗಿದ್ದರು. ಮಾತ್ರವಲ್ಲದೆ, ಆ್ಯಂಬುಲೆನ್ಸ್‌ಅನ್ನೂ ಕೊಂಡೊಯ್ದಿದ್ದರು. ಅವರನ್ನು ಸರ್ಕಾರದ 'ಯಶಸ್ವಿನಿ ಟ್ರಸ್ಟ್'ಗೆ ಟ್ರಸ್ಟಿಯಾಗಿ ನೇಮಿಸುವಂತೆ ಕಾಂಗ್ರೆಸ್ ಶಾಸಕ ಷಡಕ್ಷರಿ ಅವರು ಶಿಫಾರಸು ಮಾಡಿದ್ದರು.

## ಭ್ರಷ್ಟಾಚಾರದ ವಿರುದ್ಧ ಸಾರ್ವಜನಿಕರು ಜಾಗೃತರಾಗಿ

▸▸ಮೊದಲನೇ ಪುಟದಿಂದ




ಸಾಮಾಜಿಕ ಕಳಕಳಿಯೊಂದಿಗೆ ಮುಂದಾಗಬೇಕೆಂದರು.

ಮೋಹನ ಕೋಟಿ, ವಿರೂಪಾಕ್ಷಗೌಡ ದೇಸಾಯಿಗೌಡ್ರ, ದತ್ತು ಬೇವಿನಕಟ್ಟಿ ಸೇರಿದಂತೆ ಹಲವರು ಭ್ರಷ್ಟ ವ್ಯವಸ್ಥೆಯನ್ನು ಸುಧಾರಿಸುವ ಬಗ್ಗೆ ಮಾತನಾಡಿ, ಈ ರೀತಿಯ ಜಾಗೃತಿ ಅರಿವು ಸಪ್ತಾಹ ಕೇವಲ ಸಾಂಕೇತಿಕವಾಗಬಾರದು. ನಿತ್ಯ ಜಾಗೃತಿ ಮೂಡಿಸುವಂತಾಗಲಿ. ಇದಕ್ಕೆ ಸಾರ್ವಜನಿಕರೂ ಸಹ ತಮ್ಮ ಜವಾಬ್ದಾರಿ ಪ್ರದರ್ಶಿಸಬೇಕೆಂದರು.

ಚೇಂಬರ್ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ ಸ್ವಾಗತಿಸಿ ನಿರೂಪಿಸಿದರು. ಉಪಾಧ್ಯಕ್ಷ ಜಯದೇವ ಮೆಣಸಗಿ ವಂದಿಸಿದರು. ಉಪಾಧ್ಯಕ್ಷರಾದ ಪ್ರಕಾಶ ಉಗಲಾಟದ, ಸಿದ್ರಾಮಪ್ಪ ಉಮಚಗಿ, ರಾಘವೇಂದ್ರ ಕಾಲವಾಡ, ಅಶೋಕ ಸಂಕಣ್ಣವರ, ಅರವಿಂದ ಕಾಮತ, ಕೊಳ್ಳಿ ಸೇರಿದಂತೆ ಪ್ರಗತಿಪರ, ಸಮಾಜಮುಖಿ ಸಂಘಟನೆಗಳ ಪದಾಧಿಕಾರಿಗಳು ಸದಸ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.



ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ರಾಜ್ಯ ಘಟಕದ ಅಧ್ಯಕ್ಷ ಆರ್. ಧರ್ಮಸೇನ್ ಇವರು ಎಐಸಿಸಿ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಕೆ. ರಾಜು, ರಾಜೇಂದ್ರ ಪಾಲ್ ಗೌತಮ್ ಅವರ ಆದೇಶದ ಮೇರೆಗೆ ಕೆಪಿಸಿಸಿ ರಾಜ್ಯಾಧ್ಯಕ್ಷ ಡಿಸಿಎಂ ಡಿ.ಕೆ. ಶಿವಕುಮಾರ ಅವರ ಅನುಮೋದನೆಯೊಂದಿಗೆ ಸಿಎಂ ಸಿದ್ದರಾಮಯ್ಯ ಅವರ ಕೈ ಬಲಪಡಿಸಲು ಶಿರಹಟ್ಟಿ ಪಟ್ಟಣದ ಮುತ್ತುರಾಜ ಭಾವಿಮನಿ ಇವರನ್ನು ಕೆಪಿಸಿಸಿ ಪರಿಶಿಷ್ಟ ಜಾತಿ ವಿಭಾಗದ ರಾಜ್ಯ ಕಾರ್ಯಕಾರಿಣಿ ಸದಸ್ಯರನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

### ಎಸ್.ಕೆ. ಮೇಲ್ಮುರಿ ದತ್ತಿ ಉಪನ್ಯಾಸದಲ್ಲಿ ಡಾ. ಕಲ್ಲೇಶ ಮೂರಶಿಳ್ಳಿನ ಅಭಿಪ್ರಾಯ

# ಯೋಗದಿಂದ ದೈಹಿಕ, ಮಾನಸಿಕ ಆರೋಗ್ಯ ವೃದ್ಧಿ




■ವಿಜಯಸಾಕ್ಷಿ ಸುದ್ದಿ, ಗದಗ

ಬದಲಾದ ಜೀವನ ಶೈಲಿ ಮತ್ತು ಆಹಾರ ಸೇವನೆಯ ಪರಿಣಾಮದಿಂದ ಮಾನವ ಇಂದು ದೈಹಿಕ ಹಾಗೂ ಮಾನಸಿಕ ಸಮಸ್ಯೆಗಳಿಗೆ ಒಳಗಾಗಿದ್ದಾನೆ. ಇದರಿಂದ ಒತ್ತಡಯುಕ್ತ ಬದುಕು ನಿರ್ಮಾಣಗೊಂಡಿದೆ. ಈ ಹಿನ್ನೆಲೆಯಲ್ಲಿ ಯೋಗದ ಚಟುವಟಿಕೆಗಳು ಮನುಷ್ಯನಲ್ಲಿ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ವೃದ್ಧಿಸುತ್ತವೆ. ಇದು ನಮ್ಮ ನಿತ್ಯ ಜೀವನದ ಭಾಗವಾಗಬೇಕೆಂದು ಆಯುರ್ವೇದ ವೈದ್ಯರು, ಸಾಹಿತಿಗಳಾದ ಡಾ. ಕಲ್ಲೇಶ ಮೂರಶಿಳ್ಳಿನ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಯೋಗಬಂಧು ಸಂಗಮೇಶ ಮೇಲ್ಮುರಿ ಅವರ ಸ್ಮರಣಾರ್ಥ ಜರುಗಿದ ದತ್ತಿ ಉಪನ್ಯಾಸದಲ್ಲಿ ಯೋಗ ಮತ್ತು ಆರೋಗ್ಯ ಕುರಿತು ಮಾತನಾಡಿದರು.

ದೈಹಿಕ ಸಮಸ್ಯೆಗಳಿಗೆ ಮನಸ್ಸೇ ಮೂಲವಾಗಿರುವದರಿಂದ ಮನಸ್ಸಿನ ನಿಗ್ರಹ ಯೋಗದಿಂದ ಮಾತ್ರ ಸಾಧ್ಯ. ಆತ್ಮವಿಶ್ವಾಸ, ಆತ್ಮಪ್ರಜ್ಞೆ, ವಿಶ್ರಾಂತಿ ಮತ್ತು ಉತ್ತಮ ಮನಸ್ಥಿತಿಯನ್ನು ಹೊಂದಲು ಯೋಗ ಸಹಕಾರಿಯಾಗಿದೆ ಎಂದು ತಿಳಿಸಿದರು.

ಸಂಗಮೇಶ ಮೇಲ್ಮುರಿ ಅವರ ಸಂಸ್ಮರಣೆ ಮಾಡಿದ ಸಾಹಿತಿ ಅಂದಾನೆಪ್ಪ ವಿಭೂತಿ ಮಾತನಾಡಿ, ಎಲ್.ಐ.ಸಿ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಿ ನಿವೃತ್ತಿಯಾದ ನಂತರ ಯೋಗ ಮತ್ತು ಆಯುರ್ವೇದ ಪ್ರಚಾರದಲ್ಲಿ ಮಾಡಿದ ಸಾಧನೆಯನ್ನು ತಿಳಿಸಿ, ದಾನಿಗಳಾಗಿ ಅನೇಕ ಸಮಾಜೋಪಯೋಗಿ ಕಾರ್ಯಗಳಲ್ಲಿ ಭಾಗಿಯಾಗಿರುವದನ್ನು ಸ್ಮರಿಸಿದರು.

ಕೊಟ್ರೇಶ ಮೇಲ್ಮುರಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಸತೀಶ ಚನ್ನಪ್ಪಗೌಡ್ರ ವಂದಿಸಿದರು. ಕಾರ್ಯಕ್ರಮದಲ್ಲಿ ಡಾ. ಧನೇಶ ದೇಸಾಯಿ, ಡಾ. ಆರ್.ಎನ್. ಗೋಡಬೋಲೆ, ಡಾ. ಅರ್ಜುನ ಗೊಳಸಂಗಿ, ಅನ್ನದಾನಿ ಹಿರೇಮಠ, ಬಿ.ಎಸ್. ಹಿಂಡಿ, ವಿ.ಎಸ್. ದಲಾಲಿ, ಎಸ್. ಯು. ಸಜ್ಜನಶೆಟ್ಟರ, ರಾಜಶೇಖರ ಕರಡಿ, ರಾಜೇಶ್ವರಿ ಬಡ್ನಿ, ಅಶೋಕ ಸತ್ಯರಡ್ಡಿ, ಶಕುಂತಲಾ ಗಿಡ್ನಂದಿ, ಅಶೋಕ ಮತ್ತಿಗಟ್ಟಿ, ಜಯನಗೌಡ ಪಾಟೀಲ, ಅಮರೇಶ ರಾಂಪೂರ, ಅಶೋಕ ಹಾದಿ, ಬಸವರಾಜ ಗಣಪ್ಪನವರ, ಎಸ್.ಸಿ. ಹಾಲಕೇರಿ, ಸುಧಾ ಬಳ್ಳಿ, ಮಲ್ಲಿಕಾರ್ಜುನ ನಿಂಗೋಜಿ, ರತ್ನಾ ಪುರಂತರ, ಶಶಿಕಾಂತ ಕೊರ್ಲಹಳ್ಳಿ, ಎಂ.ಎಫ್. ಡೋಣಿ, ಬಸವರಾಜ ನೆಲಜೇರಿ, ರಾಜಶೇಖರ ಪಾಟೀಲ, ಬೂದಪ್ಪ ಅಂಗಡಿ, ಕಿರಣ ಗುಗ್ಗರಿ, ರಮೇಶ ಹಂಚಿನಾಳ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ಸುರೇಶ ನಲವಡಿ ಕೃಷ್ಣಾ ಕಡಿಯವರು ಮೊದಲಾದವರು ಭಾಗವಹಿಸಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಒಂದು ಕಾಲದಲ್ಲಿ ಅನ್ನದ ಕೊರತೆಯಿತ್ತು. ಆದರೆ ಇಂದು ಆರೋಗ್ಯದ ಕೊರತೆಯಿದೆ. ಆರೋಗ್ಯದ ಅನಕ್ಷರತೆಯಿಂದ ದುಡಿಮೆಯ ಬಹುಪಾಲನ್ನು ಆರೋಗ್ಯ ರಕ್ಷಣೆಗಾಗಿ ಕಳೆಯುವ ಸಂದರ್ಭ ಒದಗಿ ಬಂದಿದೆ. ಹೀಗಾಗಿ, ಶಾಲಾ-ಕಾಲೇಜುಗಳಲ್ಲಿ ಆರೋಗ್ಯ ಶಿಕ್ಷಣ ನೀಡುವಂತಾಗಬೇಕೆಂದು ತಿಳಿಸಿದರು.

## ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ವಾಗ್ದಾಳಿ ನಡೆಸಿದ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಗ್ರಾಮೀಣಾಭಿವೃದ್ಧಿ ಸಚಿವ ಮತ್ತು ಕಾಂಗ್ರೆಸ್ ನಾಯಕ ಪ್ರಿಯಾಂಕ್ ಖರ್ಗೆ ಅವರು ಭಾರತದ ಬೆಳೆಯುತ್ತಿರುವ ಸೆಮಿಕಂಡಕ್ಟರ್ ಉದ್ಯಮದ ಸಂದರ್ಭದಲ್ಲಿ ಅಸ್ಸಾಂನ ಯುವಕರ ಸಾಮರ್ಥ್ಯ ಮತ್ತು ಪ್ರತಿಭೆಯನ್ನು ಪ್ರಶ್ನಿಸಿದ್ದಾರೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಆರೋಪಿಸಿದ್ದಾರೆ.

ಖರ್ಗೆ ಅವರ ಹೇಳಿಕೆಗಳು ರಾಜ್ಯಾದ್ಯಂತ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದ್ದು, ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಮತ್ತು ಆಡಳಿತಾರೂಢ ಭಾರತೀಯ ಜನತಾ ಪಕ್ಷದಿಂದ ತೀವ್ರ ಖಂಡನೆಗೆ ಒಳಗಾಗಿದೆ.

ಪ್ರಿಯಾಂಕ ಖರ್ಗೆ ಅವರ ಮೇಲೆ ತೀಕ್ಷ್ಣವಾದ ದಾಳಿ ನಡೆಸಿ, ಈ ಹೇಳಿಕೆಯನ್ನು 'ಅಸ್ಸಾಂನ ಯುವಕರ ಘನತೆ ಮತ್ತು ಕಠಿಣ ಪರಿಶ್ರಮಕ್ಕೆ ಮಾಡಿದ ಅವಮಾನ' ಎಂದು ಹೇಳಿದ್ದಾರೆ.

"ಪ್ರಿಯಾಂಕ್ ಖರ್ಗೆ ತಮ್ಮನ್ನು ತಾವು ಪ್ರಥಮ ದರ್ಜೆ ಮೂರ್ಖ ಎಂದು ಬಹಿರಂಗಪಡಿಸಿದ್ದಾರೆ. ಅವರ ಹೇಳಿಕೆಯು ಅಸ್ಸಾಂನ ಯುವಕರನ್ನು ಕೀಳಾಗಿ ನೋಡುವ ಆಳವಾದ ಪೂರ್ವಾಗ್ರಹ ಪೀಡಿತ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ. ಅವರ ಶಿಕ್ಷಣ ಮತ್ತು ಸಾಮರ್ಥ್ಯವನ್ನು ಪ್ರಶ್ನಿಸುವ ಮೂಲಕ, ಅವರು ನಮ್ಮ ರಾಜ್ಯದ ಪ್ರತಿಯೊಬ್ಬ ಯುವ ವೃತ್ತಿಪರರನ್ನು ಅವಮಾನಿಸಿದ್ದಾರೆ. ಅವರ ಮಾತುಗಳನ್ನು ಕಾಂಗ್ರೆಸ್ ಖಂಡಿಸಿಲ್ಲ, ಇದು ಅವರು ಈಶಾನ್ಯವನ್ನು ಹೇಗೆ ನೋಡುತ್ತಾರೆ ಎಂಬುದನ್ನು ಸ್ಪಷ್ಟವಾಗಿ ತೋರಿಸುತ್ತದೆ. ಅವರ ವಿಭಜನಕಾರಿ ಮತ್ತು ಅವಹೇಳನಕಾರಿ ಹೇಳಿಕೆಗಾಗಿ ಅವರ ವಿರುದ್ಧ ಕಾನೂನು ಆಯ್ಕೆಗಳನ್ನು ನಾವು ಅನ್ವೇಷಿಸುತ್ತಿದ್ದೇವೆ" ಎಂದು ಸಿಎಂ ಶರ್ಮಾ ಸುದ್ದಿಗಾರರಿಗೆ ತಿಳಿಸಿದರು.



## ನಿಧನ

### ಗೋವಿಂದಪ್ಪ ಯಾವಗಲ್ಲ



**ಮುಳಗುಂದ:** ಪಟ್ಟಣ ಸಮೀಪದ ಕುರ್ತಕೋಟಿ ಗ್ರಾಮದ ಗೋವಿಂದಪ್ಪ ನಿಂಗಪ್ಪ ಯಾವಗಲ್ಲ (69) ರವಿವಾರ ನಿಧನರಾದರು. ಮೃತರು ಪತ್ನಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ಬಾಕಿ ವೇತನ ವ್ಯತ್ಯಾಸದ ಹಣ ಮಂಜೂರಾತಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ರಸ್ತೆ ಸಾರಿಗೆ ನೌಕರರ ವೇತನ ಪರಿಷ್ಕರಣೆ ಮತ್ತು ನಿವೃತ್ತ ನೌಕರರ ಬಾಕಿ ಉಳಿದಿರುವ ವೇತನ ವ್ಯತ್ಯಾಸದ ಹಣವನ್ನು ಜಂಟಿ ಸಮಿತಿಯ ಸಭೆಯಲ್ಲಿ ಮುಖ್ಯಮಂತ್ರಿಗಳ ಮನವೊಲಿಸಿ ಮಂಜೂರಾತಿಗೆ ಕ್ರಮ ಜರುಗಿಸಬೇಕೆಂದು ಕೆ.ಎಸ್.ಆರ್.ಟಿ.ಸಿ ಜಂಟಿ ಸಮಿತಿ ಹಾಗೂ ಎಸ್.ಸಿ/ಎಸ್.ಟಿ ನೌಕರರ ಸಂಘವು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿತು.

ಸಂಘಟನೆಯ ಪ್ರಧಾನ ಕಾರ್ಯದರ್ಶಿ ಎಚ್.ಸಿ. ಕೊಪ್ಪಳ ಹಾಗೂ ಜಂಟಿ ಸಮಿತಿಯ ಸಂಚಾಲಕ ಶಾಂತಣ್ಣ ಮುಳವಾಡ ಅವರ ನೇತೃತ್ವದಲ್ಲಿ ಸಚಿವರನ್ನು ಭೇಟಿಯಾದ ನಿಯೋಗವು, ರಸ್ತೆ ಸಾರಿಗೆ ನೌಕರರು ಹಗಲಿರುಳು ಪರಿಶ್ರಮಿಸಿ ಕರ್ತವ್ಯ ನಿರ್ವಹಿಸುತ್ತಿದ್ದು, ಅವರಿಗೆ ಬೆಲೆ ಏರಿಕೆಯ ಇಂದಿನ ದಿನಗಳಲ್ಲಿ ಹಾಗೂ ನಿವೃತ್ತಿಯ ನಂತರ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ಮತ್ತು ಕುಟುಂಬ ನಿರ್ವಹಣೆಗೆ ಆರ್ಥಿಕವಾಗಿ ತೀವ್ರ ತೊಂದರೆ ಅನುಭವಿಸುತ್ತಿರುವ ನೌಕರರ ಬೇಡಿಕೆಯನ್ನು ಪರಿಶೀಲಿಸಿ ಬೇಡಿಕೆ ಈಡೇರಿಸಬೇಕೆಂದು ಮನವಿಯಲ್ಲಿ ವಿವರಿಸಿದೆ. ಮನವಿ ಅರ್ಪಣೆಯ ಸಂದರ್ಭದಲ್ಲಿ ರಾಮೇನಹಳ್ಳಿ, ಸಂಗಣ್ಣವರ, ಅಯ್ಯನಗೌಡ್ರ, ಪೂಜಾರ, ಬಿ.ಎ. ದೊಡ್ಡಮನಿ, ಮಂಜು ಪೂಜಾರ, ಜಗದೀಶ ಆದಿ ಮುಂತಾದವರಿದ್ದರು.

### ಉಪಗ್ರಾಮ ರಚನೆ, ಪಿಎಂವೈ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ನಿರ್ಲಕ್ಷ್ಯ ತೋರಿದ ಪಿಡಿಓಗಳಿಗೆ ನೋಟೀಸ್ ನೀಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದಲ್ಲಿನ ವಸತಿ ಯೋಜನೆ ಫಲಾನುಭವಿಗಳಿಗೆ ಉಪಗ್ರಾಮ ರಚನೆ ಯೋಜನೆಯಡಿ ಇ-ಸ್ವತ್ತು ಉತಾರ ಕೊಡುವಲ್ಲಿ ಮತ್ತು ಕೇಂದ್ರ ಸರ್ಕಾರದ ಪಿಎಂವೈ ಯೋಜನೆಯಲ್ಲಿ ಆಶ್ರಯ ಮನೆಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡುವ ಕಾರ್ಯದಲ್ಲಿ ನಿರ್ಲಕ್ಷ್ಯ ತೋರಿದ ಪಿಡಿಓಗಳಿಗೆ ನೋಟೀಸ್ ನೀಡಬೇಕು ಮತ್ತು ಈ ಕಾರ್ಯದ ಪ್ರಗತಿ ವರದಿಯನ್ನು ತ್ವರಿತಗತಿಯಲ್ಲಿ ಸಲ್ಲಿಸುವಂತೆ ಶಾಸಕ ಡಾ. ಚಂದ್ರು ಲಮಾಣಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅವರು ಸೋಮವಾರ ಪಟ್ಟಣದ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಉಪಗ್ರಾಮ ರಚನೆ ಹಾಗೂ ಪಿಎಂವೈ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, 2018ರಲ್ಲಿನ ಪಿಎಂವೈ ಯೋಜನೆಯ ಅರ್ಹ ಫಲಾನುಭವಿಗಳ ಪಟ್ಟಿ ಅಂತಿಮಗೊಳಿಸಿ ಹೊಸ ಫಲಾನುಭವಿಗಳ ಪಟ್ಟಿ ಸಿದ್ಧತೆಗೆ ಅವಕಾಶ ಕಲ್ಪಿಸಬೇಕು. ಈಗಾಗಲೇ ಗ್ರಾಮೀಣ ಭಾಗದಲ್ಲಿ ಮನೆ ನಿರ್ಮಿಸಿಕೊಂಡು ಗ್ರಾಮ ಪಂಚಾಯಿತಿಯಿಂದ ಎಲ್ಲ ಸೌಲಭ್ಯ ಪಡೆಯುತ್ತಿದ್ದರೂ ಅವರಿಗೆ ಉತಾರ/ಹಕ್ಕುಪತ್ರ ಕೊಡುವಲ್ಲಿ ಉಂಟಾದ ತೊಂದರೆ ನಿವಾರಣೆಗೆ ಉಪಗ್ರಾಮ ಯೋಜನೆಯಡಿ ಉತಾರ ಕೊಡುವ ವ್ಯವಸ್ಥೆ ಮಾಡಬೇಕು.



ಉಪಗ್ರಾಮ ಯೋಜನೆಯ ಅನಕೂಲತೆ ಜನರಿಗೆ ತಲುಪಿಸಬೇಕು. ಕೆಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆಲ ಸದಸ್ಯರು ಆಶ್ರಯ ಯೋಜನೆಯಡಿ ಮನೆ ನಿರ್ಮಾಣದ ಫಲಾನುಭವಿಗಳಿಂದ ಲಂಚ ಪಡೆದಿದ್ದಾರೆ ಎಂಬ ಆರೋಪಗಳು ಕೇಳಿ ಬರುತ್ತಿವೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಬೇಕು. ಗ್ರಾಮೀಣ ಭಾಗದ ಜನರಿಗೆ ಸರ್ಕಾರದ ಸೌಲಭ್ಯ ಕಲ್ಪಿಸುವ, ಅವರ ಕಷ್ಟಗಳಿಗೆ ಸ್ಪಂದಿಸುವ ಸದಾವಕಾಶ ಪಿಡಿಓಗಳಿಗಿದೆ. ಸದ್ಯ ಹೊಸದಾಗಿ ಮನೆ ನಿರ್ಮಿಸಿಕೊಳ್ಳಲು ಆಸಕ್ತರಿದ್ದರಿದ್ದಾರೆ. 2018ರ ಫಲಾನುಭವಿಗಳ ಪಟ್ಟಿ ಅಂತಿಮವಾಗಬೇಕಿದೆ. ಇನ್ನು ಮನೆ ನಿರ್ಮಾಣದ ಸಹಾಯಧನ ಕಲ್ಪಿಸುವಲ್ಲಿ ಉಂಟಾಗಿರುವ ತಾಂತ್ರಿಕ ಸಮಸ್ಯೆ ಪಟ್ಟಿ ಮಾಡಿ ಕೊಡಿ, ರಾಜ್ಯಮಟ್ಟದ ದಿಶಾ ಕಮಿಟಿಯ ಸಭೆಯಲ್ಲಿ ಚರ್ಚಿಸುತ್ತೇನೆ ಎಂದರು.

> ಸರ್ಕಾರದ ಆದೇಶದನ್ವಯ ಪ್ರತಿ ಗ್ರಾಮ ಪಂಚಾಯಿತಿಯಲ್ಲಿಯೂ ಗ್ರಾಮ ಆಡಳಿತಾಧಿಕಾರಿಗಳನ್ನೊಳಗೊಂಡು ಆಯಾ ಭಾಗದ ಜನಪ್ರತಿನಿಧಿಗಳು, ಮುಖಂಡರನ್ನು ಕರೆದು ಮಹಾನ್ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಜಯಂತಿಗಳನ್ನು ತಪ್ಪದೇ ಆಚರಿಸಬೇಕು. ಈ ನಿಟ್ಟಿನಲ್ಲಿ ತಹಸೀಲ್ದಾರ, ತಾ.ಪಂ ಇಓಗಳು ಜವಾಬ್ದಾರಿ ನಿರ್ವಹಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಸೂಚಿಸಿದರು.

ಸಭೆಯಲ್ಲಿ ದೊಡ್ಡೂರ, ಗೋನಾಳ, ಬಾಲೇಹೊಸೂರ, ಕೊಂಚಿಗೇರಿ ಗ್ರಾಮಗಳ ಜನರು ತಮ್ಮ ಗ್ರಾ.ಪಂಗಳ ಸಮಸ್ಯೆಯನ್ನು ಶಾಸಕರ ಗಮನಕ್ಕೆ ತಂದರು. ಗೋವನಾಳ ಗ್ರಾ.ಪಂ ಸದಸ್ಯ ಮಂಜನಗೌಡ ಕೆಂಚನಗೌಡ್ರ, ತಮ್ಮ ಗ್ರಾಮದಲ್ಲಿ 4 ತಿಂಗಳಿಂದ ಕಾರ್ಯದರ್ಶಿ ಕರ್ತವ್ಯಕ್ಕೆ ಗೈರಾಗಿದ್ದಾರೆ. ಜನರು ಉತಾರ ಪಡೆಯಲು ಹಾಗೂ ಅಗತ್ಯ ಕೆಲಸಗಳಿಗೆ ಅಲೆಯುತ್ತಿದ್ದಾರೆ ಎಂಬಿತ್ಯಾದಿ ದೂರುಗಳನ್ನು ನೀಡಿದರು. ಕೂಡಲೇ ಈ ಸಮಸ್ಯೆ ಬಗೆಹರಿಸುವಂತೆ ತಾ.ಪಂ ಇಓ ಅವರಿಗೆ ಶಾಸಕರು ಸೂಚಿಸಿದರು.

ಈ ವೇಳೆ ತಹಸೀಲ್ದಾರ ರಾಘವೇಂದ್ರ ಕುಲಕರ್ಣಿ, ಲಕ್ಷ್ಮೇಶ್ವರ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಶಿರಹಟ್ಟಿಯ ಇಓ ರಾಮಣ್ಣ ದೊಡ್ಡಮನಿ, ಕಂದಾಯ ಅಧಿಕಾರಿ ಜೆ.ಎ. ಮನಿಯಾರ, ಶಿರಹಟ್ಟಿ/ಲಕ್ಷ್ಮೇಶ್ವರ ಗ್ರಾ.ಪಂ ಪಿಡಿಓ, ಕಾರ್ಯದರ್ಶಿ, ಗ್ರಾಮ ಆಡಳಿತಾಧಿಕಾರಿಗಳು ಹಾಜರಿದ್ದರು.

### ಲಕ್ಷ್ಮೇಶ್ವರ ತಹಸೀಲ್ದಾರ ಧನಂಜಯ ಮಾಲಗತ್ತಿರವರನ್ನು ಪುನಃ ಕರ್ತವ್ಯಕ್ಕೆ ಹಾಜರುಪಡಿಸುವಂತೆ ಮನವಿ

# ತಹಸೀಲ್ದಾರರು ತಮ್ಮ ಕರ್ತವ್ಯ ನಿರ್ವಹಿಸಿದ್ದಾರೆ



■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರ ತಾಲೂಕು ತಹಸೀಲ್ದಾರ ಧನಂಜಯ ಮಾಲಗತ್ತಿರವರನ್ನು ಪುನಃ ಕರ್ತವ್ಯಕ್ಕೆ ಹಾಜರುಪಡಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಲಕ್ಷ್ಮೇಶ್ವರ/ಶಿರಹಟ್ಟಿ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಸಮಿತಿಯ ಪದಾಧಿಕಾರಿಗಳು, ವೀರರಾಣಿ ಕಿತ್ತೂರ ಚೆನ್ನಮ್ಮ ಜಯಂತಿ ಹಾಗೂ ವಿಜಯೋತ್ಸವ ಕಾರ್ಯಕ್ರಮವನ್ನು ಆಚರಿಸಿಲ ಹಾಗೂ ಕಾರ್ಯಕ್ರಮ ಮಾಡುವ ಕುರಿತು ಪೂರ್ವಭಾವಿ ಸಭೆ ಮಾಡಿಲ್ಲವೆಂದು ಆರೋಪಿಸಿ ಅವರ ವಿರುದ್ಧ ಪ್ರತಿಭಟನೆ ಮಾಡಿದ್ದಲ್ಲದೇ ತಹಸೀಲ್ದಾರರ ಕರ್ತವ್ಯಕ್ಕೆ ಅಡ್ಡಿಪಡಿಸಲಾಗಿದೆ.

ತಾಲೂಕು ದಂಡಾಧಿಕಾರಿಗಳು ದಲಿತ ವರ್ಗದವರೆನ್ನುವ ಕಾರಣಕ್ಕೆ ಕಛೇರಿಯ ಮೇಲ್ಜಾತಿಯ ಸಿಬ್ಬಂದಿ ವರ್ಗದವರು ಹುನ್ನಾರ ನಡೆಸಿದ್ದಾರೆ. ಲಕ್ಷ್ಮೇಶ್ವರ ತಹಸೀಲ್ದಾರ ಕಚೇರಿಯಲ್ಲಿನ ಎಲ್ಲಾ ಸಿಬ್ಬಂದಿ ವರ್ಗದವರನ್ನು ಬೇರೆ ಸ್ಥಳಕ್ಕೆ ನಿಯೋಜಿಸಬೇಕು. ಗದಗ ಜಿಲ್ಲೆಯ ಲಕ್ಷ್ಮೇಶ್ವರ/ಶಿರಹಟ್ಟಿ ಸೇರಿ ಎರಡೂ ತಾಲೂಕುಗಳಲ್ಲಿ ತಹಸೀಲ್ದಾರ ಕಚೇರಿಯಲ್ಲಿ, ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಮತ್ತು ಪುರಸಭೆ ಕಚೇರಿಗಳು ಕರ್ತವ್ಯ ನಿರ್ವಹಿಸುವುದು ಕಷ್ಟಕರವಾಗುತ್ತಿದ್ದು, ಲಕ್ಷ್ಮೇಶ್ವರ ತಹಸೀಲ್ದಾರ ಧನಂಜಯ ಮಾಲಗತ್ತಿರವರನ್ನು ಮರಳಿ ಲಕ್ಷ್ಮೇಶ್ವರ ತಹಸೀಲ್ದಾರರೆಂದು ಕರ್ತವ್ಯಕ್ಕೆ ಹಾಜರಪಡಿಸಬೇಕೆಂದು ಮನವಿ ಸಲ್ಲಿಸಿದರು.

> ತಹಸೀಲ್ದಾರರು ಹಾಗೂ ಆಡಳಿತ ವರ್ಗದವರು ಚೆನ್ನಮ್ಮನವರ ಭಾವಚಿತ್ರವಿಟ್ಟು ಪೂಜೆ ಸಲ್ಲಿಸಿ ಇಲಾಖೆಯಿಂದ ಮಾಡಬೇಕಾದ ಕರ್ತವ್ಯ ಮಾಡಿದ್ದಾರೆ. ಆದಾಗ್ಯೂ ಪ್ರತಿಭಟನಾಕಾರರು ಸಂಬಂಧಿಸಿದ ಇಲಾಖೆಯಿಂದ ಅನುಮತಿ ಪಡೆದುಕೊಳ್ಳದೇ ದಿಢೀರನೆ ಪ್ರತಿಭಟನೆ ಮಾಡಿ ದಂಡಾಧಿಕಾರಿಗಳಿಗೆ ಅವಮಾನವಾಗುವ ರೀತಿಯಲ್ಲಿ ನಡೆದುಕೊಂಡಿದ್ದಾರೆ ಎಂದು ಮನವಿಯ ಮೂಲಕ ತಿಳಿಸಿದರು.

ಈ ಸಂದರ್ಭದಲ್ಲಿ ಸುರೇಶ ನಂದೆಣ್ಣವರ, ಬಸವಣ್ಣೆಪ್ಪ ನಂದೆಣ್ಣವರ, ದೇವಪ್ಪ ನಂದೆಣ್ಣವರ, ಹೊನ್ನಪ್ಪ ಸಂಜೀವಣ್ಣನವರ್, ಕೋಟೆಪ್ಪ ವರದಿ, ನಾಗರಾಜ್ ದೊಡ್ಡಮನಿ, ಫಕ್ಕಿರೇಶ್ ಮ್ಯಾಟಣ್ಣನವರ್, ಚಂದ್ರಶೇಖರ್ ಹರಿಜನ, ಮಾರ್ತಂಡಪ್ಪ ಹಾದಿಮನಿ, ಉಡಚಪ್ಪ ಹಳ್ಳಿಕೇರಿ, ನಾಗರಾಜ್ ಪೋತರಾಜ್, ಸುರೇಶ್ ಬೀರಣ್ಣವರ್, ಫಕ್ಕಿರೇಶ್ ನಂದಣ್ಣವರ, ಫಕೀರೇಶ ಬಜಕ್ಕನವರ್, ಫಕ್ಕೀರೇಶ ನಡುವಿನಕೇರಿ, ರಾಮು ಗಡದವರ, ರಾಮು ಅಡುಗೆಮನೆ, ನಾಗರಾಜ ನಂದಣ್ಣವರ, ರವಿ ಗಾಜಿ, ರವಿ ಗುಡಿಮನಿ, ಮಂಜು ಸೀತಮ್ಮನವರ್, ಶೇಖರ್ ಒಂಟಿ, ಜಗದೀಶ್ ಹುಲಿಗೆಮ್ಮನವರ, ಗಾಳೆಪ್ಪ ಹರಿಜನ್, ಹನುಮಂತಪ್ಪ ಹರಿಜನ, ಗುಡ್ಡಪ್ಪ ಮತ್ತೂರು, ಪರಶುರಾಮ್ ಸಂಗಮ್‌ನವರ, ಹನುಮಂತ ಸಂಗಮನವರ್, ದ್ಯಾಮಣ್ಣ ಮ್ಯಾಗೇರಿ, ಜಬೀಬ ಉಲ್ಲಾ, ರಾಜು ಕಮತ, ಮಧು ಹಾದಿಮನಿ, ಮಹಾಂತೇಶ್ ಗುಡಿಸಲಮನಿ, ಸಂತೋಷ ಹಾದಿಮನಿ, ಶಶಿಕುಮಾರ್ ಪೂಜಾರ್, ಸದಾನಂದ ನಂದನವರ್, ಅನಿಲ ನಂದಣ್ಣವರ್, ಮಾರ್ತಂಡಪ್ಪ ಗಾಳಪ್ಪನವರ್, ಗೋಣೆಪ್ಪ ಹರಿಜನ, ಫಕೀರೇಶ ಪೂಜಾರ ಉಪಸ್ಥಿತರಿದ್ದರು.

## ಹುಲ್ಲೂರ ಗ್ರಾಮದಲ್ಲಿ ಇ-ಕೆವೈಸಿ ಜಾಗೃತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ರೋಣ

ಕೇಂದ್ರ ಸರ್ಕಾರದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ)ಯಡಿ ಕೂಲಿಕಾರರಿಗೆ ಇ-ಕೆವೈಸಿ ಪ್ರಕ್ರಿಯೆಯನ್ನು ಕಡ್ಡಾಯಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ರೋಣ ತಾಲೂಕಿನ ಹುಲ್ಲೂರ ಗ್ರಾಮ ಪಂಚಾಯಿತಿಯಲ್ಲಿ ಇ-ಕೆವೈಸಿ ಕಾರ್ಯ ನಡೆಯುತ್ತಿರುವ ಸ್ಥಳಕ್ಕೆ ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಭೇಟಿ ನೀಡಿ, ಖುದ್ದು ಫೋಟೋ ತೆಗೆದು ಇ-ಕೆವೈಸಿ ಪ್ರಕ್ರಿಯೆಯನ್ನು ನಡೆಸಿ ಜಾಗೃತಿ ಮೂಡಿಸಿದರು.

ಹುಲ್ಲೂರ ಗ್ರಾ.ಪಂಗೆ ಭೇಟಿ ನೀಡಿದ ಅವರು, ನರೇಗಾ ಕೂಲಿಕಾರರೊಂದಿಗೆ ಸಮಾಲೋಚನೆ ನಡೆಸಿ, ಇ-ಕೆವೈಸಿ ಪ್ರಕ್ರಿಯೆಯನ್ನು ಅಕ್ಟೋಬರ್ 31ರೊಳಗಾಗಿ ಪೂರ್ಣಗೊಳಿಸುವಂತೆ ಸಿಬ್ಬಂದಿಗಳಿಗೆ ಸೂಚಿಸಿದರು.

ಇ-ಕೆವೈಸಿ ಮಾಡಿಸದಿದ್ದರೆ ನರೇಗಾ ಉದ್ಯೋಗ ಚೀಟಿಗಳು ರದ್ದಾಗುವ ಸಾಧ್ಯತೆ ಇದೆ. ಇದರಿಂದ ಕೂಲಿಕಾರರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸದ ಅವಕಾಶ ಕಳೆದುಕೊಳ್ಳುವ ಆತಂಕವಿದೆ. ಆದ್ದರಿಂದ ಎಲ್ಲರೂ ತಕ್ಷಣವೇ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಅವರು ಗ್ರಾಮಸ್ಥರಿಗೆ ತಿಳಿಸಿದರು. ಬೆಳಿಗ್ಗೆ ಮತ್ತು ಸಾಯಂಕಾಲದ ವೇಳೆಯಲ್ಲಿ ನೆಟ್‌ವರ್ಕ್ ಸಮಸ್ಯೆ ಕಡಿಮೆ ಇರುವುದರಿಂದ ಈ ಸಮಯದಲ್ಲಿ ಇ-ಕೆವೈಸಿ ಪ್ರಕ್ರಿಯೆಯನ್ನು ವೇಗವಾಗಿ ನಡೆಸಲು ಸಿಬ್ಬಂದಿಗೆ ಸಲಹೆ ನೀಡಿದರು.



ರೋಣ ತಾಲೂಕಿನಲ್ಲಿ ಒಟ್ಟು 50090 ನರೇಗಾ ಕೂಲಿಕಾರರಿದ್ದು, ಈ ಪೈಕಿ ಸುಮಾರು 20758 ಇ-ಕೆವೈಸಿ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಿದ್ದಾರೆ. ಉಳಿದ ಕೂಲಿಕಾರರಿಗೆ ಮುಂದಿನ ನಾಲ್ಕು ದಿನಗಳಲ್ಲಿ ಈ ಕಾರ್ಯವನ್ನು ಮುಗಿಸಲು ಗ್ರಾ.ಪಂ ಸಿಬ್ಬಂದಿಗಳಿಗೆ ಚಂದ್ರಶೇಖರ ಕಂದಕೂರ ತಾಕೀತು ಮಾಡಿದರು.

ತಾ.ಪಂ ವ್ಯವಸ್ಥಾಪಕ ದೇವರಾಜ ಸಜ್ಜನಶೆಟ್ಟರ, ಹುಲ್ಲೂರ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಗಣಕಯಂತ್ರ ನಿರ್ವಾಹಕರು, ನರೇಗಾ ಯೋಜನೆಯ ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಎಂಐಎಸ್ ಸಂಯೋಜಕರು, ಬಿಎಫ್‌ಟಿ ಮತ್ತು ಗ್ರಾಮ ಕಾಯಕ ಮಿತ್ರರು ಉಪಸ್ಥಿತರಿದ್ದರು.

# ವೀರವನಿತೆ ಚೆನ್ನಮ್ಮ ಸ್ವಾಭಿಮಾನದ ಪ್ರತೀಕ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ನಾಡಿನ ವೀರವನಿತೆಯಾಗಿ ತನ್ನ ಅಪ್ರತಿಮ ಸಾಹಸ ಮತ್ತು ಶೌರ್ಯಗಳಿಂದ ದೇಶದ ಸ್ವಾತಂತ್ರ್ಯಕ್ಕಾಗಿ ಮೆರೆದ ಚೆನ್ನಮ್ಮಳ ಧೈರ್ಯ ಇಂದಿಗೂ ಪ್ರಸ್ತುತವಾಗಿದ್ದು, ರಾಣಿ ಚೆನ್ನಮ್ಮ ನಮ್ಮೆಲ್ಲರ ಸ್ವಾಭಿಮಾನದ ಪ್ರತೀಕವಾಗಿದ್ದಾಳೆ ಎಂದು ವೀರಶೈವ ಲಿಂಗಾಯತ ಪಂಚಮಸಾಲಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಮಹಾಂತಶೆಟ್ಟರ ಅಭಿಪ್ರಾಯಪಟ್ಟರು.

ಅವರು ಪಟ್ಟಣದಲ್ಲಿ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಮಹಿಳಾ ವೇದಿಕೆಯ ವತಿಯಿಂದ ರವಿವಾರ ಸಮಾಜದ ಲಕ್ಷ್ಮವ್ವ ಆಚಾರಿ ಅವರ ನಿವಾಸದಲ್ಲಿ ವೀರರಾಣಿ ಕಿತ್ತೂರ ಚೆನ್ನಮ್ಮಳ 201ನೇ ವಿಜಯೋತ್ಸವ ಹಾಗೂ 247ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾಜದ ಹಿರಿಯರಾದ ಶಕುಂತಲಾ ಹೊರಟ್ಟಿ, ಲಕ್ಷ್ಮವ್ವ ಆಚಾರಿ ಮಾತನಾಡಿ, ಬ್ರಿಟೀಷರ ವಿರುದ್ಧ ಸ್ವಾತಂತ್ರ್ಯದ ಕ್ರಾಂತಿ ಕಹಳೆ ಮೊಳಗಿಸಿದ ವೀರರಾಣಿ ಕಿತ್ತೂರು ಚೆನ್ನಮ್ಮಳ ಕನ್ನಡ ನಾಡಿನ ಹೆಮ್ಮೆ. ಚೆನ್ನಮ್ಮಳ ದೇಶಪ್ರೇಮ, ಶೌರ್ಯ, ಸಾಹಸ ಇಂದಿನ ಯುವ ಪೀಳಿಗೆಗೆ ಆದರ್ಶವಾಗಬೇಕು. ಈ ನಿಟ್ಟಿನಲ್ಲಿ ಪಾಲಕರು ಮಕ್ಕಳಿಗೆ ಬಾಲ್ಯದಲ್ಲಿಯೇ ವೀರರ ಚರಿತ್ರೆಯನ್ನು ಮನದಟ್ಟು ಮಾಡಬೇಕು ಎಂದು ಕರೆ ನೀಡಿದರು.


ಕಾರ್ಯಕ್ರಮದಲ್ಲಿ ಚೆನ್ನಮ್ಮ ಗುರಿಕಾರ್, ಶೈಲಾ ಆದಿ, ಮಂಜುಳಾ ಪಿಳ್ಳಿ, ವಿಜಯಕ್ಕ ಬಾಳೆಕಾಯಿ, ಸುಶೀಲಾ ಪೂಜಾರ, ಚೆನ್ನಮ್ಮ ಚಿಂಚಲಿ, ಕುಸುಮಾ ಸೋಮಕ್ಕನವರ್, ಸರೋಜಕ್ಕ ಬನ್ನೂರ, ನೀಲಕ್ಕ ಬೂದಿಹಾಳ, ಗೀತಾ ಕೊಡ್ಲಿ, ಸುನಂದಾ ಆಚಾರಿ, ಚಂಪಾವತಿ ಬಾಳಿಕಾಯಿ, ಗುರುಬಾಯಿ ಹುಲಸೂರ ಸೇರಿದಂತೆ ವಿನಾಯಕ ನಗರದ ಮಹಿಳೆಯರು ಉಪಸ್ಥಿತರಿದ್ದರು.

## ಯುವತಿ ವಿಚಾರಕ್ಕೆ ಗಲಾಟೆ: ಹಾಡಹಗಲೇ ಮಚ್ಚಿನಿಂದ ಕೊಚ್ಚಿ ಯುವಕನ ಬರ್ಬರ ಹತ್ಯೆ

■ವಿಜಯಸಾಕ್ಷಿ ಸುದ್ದಿ, ಹಾಸನ

ಜಿಲ್ಲೆಯ ಬೇಲೂರು ಪಟ್ಟಣದ ಸಾರಿಗೆ ಬಸ್ ನಿಲ್ದಾಣದಲ್ಲಿ ಮಚ್ಚಿನಿಂದ ಕೊಚ್ಚಿ ಯುವಕನನ್ನು ಬರ್ಬರವಾಗಿ ಕೊಲೆ ಮಾಡಿರುವ ಘಟನೆ ನಡೆದಿದೆ. ಚನ್ನಕೇಶವಗೌಡ್ರು ಬೀದಿಯ ನಿವಾಸಿ ಗಿರೀಶ್ (28) ಕೊಲೆಯಾದ ಯುವಕನಾಗಿದ್ದು, ಕೊಲೆಗೈದ ಆರೋಪಿ ಸುರಪುರ ಗ್ರಾಮದ ಶ್ರೀನಿವಾಸ್ ಅಲಿಯಾಸ್ ಸೀನ, ಕೋಳಿ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದಾನೆ.

ಭಾನುವಾರ ರಾತ್ರಿ ಗಿರೀಶ್ ಮತ್ತು ಸೀನನ ನಡುವೆ ಯುವತಿ ವಿಚಾರಕ್ಕೆ ಗಲಾಟೆ ನಡೆದಿತ್ತು. ಈ ವಿಚಾರದಿಂದ ಕೋಪಗೊಂಡ ಸೀನ, ಸೋಮವಾರ ಬೆಳಿಗ್ಗೆ ಸುಮಾರು 11 ಗಂಟೆ ವೇಳೆಗೆ ಸಾರಿಗೆ ಬಸ್ ನಿಲ್ದಾಣದ ಬಳಿ ಗಿರೀಶ್ ಶೌಚಾಲಯದಿಂದ ಹೊರಬಂದ ಕ್ಷಣದಲ್ಲಿ, ಕಾದು ನಿಂತಿದ್ದ ಸೀನ ಮಚ್ಚಿನಿಂದ ನಿರಂತರವಾಗಿ ಕೊಚ್ಚಿ, ಸ್ಥಳದಿಂದ ಪರಾರಿಯಾಗಿದ್ದಾನೆ.



ತೀವ್ರ ಗಾಯಗೊಂಡ ಗಿರೀಶ್‌ನನ್ನು ಅಂಬ್ಯುಲೆನ್ಸ್‌ನಲ್ಲಿ ಜಿಲ್ಲಾಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಸಾವನ್ನಪ್ಪಿದ್ದಾನೆ. ಘಟನೆಯ ನಂತರ ಬೇಲೂರು ಪೊಲೀಸ್ ಠಾಣೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಆರೋಪಿಯ ಪತ್ತೆಗೆ ಶೋಧ ಕಾರ್ಯ ಆರಂಭಿಸಲಾಗಿದೆ.

## ಗ್ರಾಮ ಪಂಚಾಯತ ಕಾರ್ಯಾಲಯ, ಕೋಗನೂರ

ತಾಲೂಕ :- ಶಿರಹಟ್ಟಿ ಜಿಲ್ಲಾ:- ಗದಗ

ಸಂ.ಗ್ರಾ.ಪಕೋ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 ದಿನಾಂಕ:-27-10-2025

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕೋಗನೂರ ಇವರು 2025-26ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಕಾಮಗಾರಿಯ ಸಂಖ್ಯೆ | ಕಾಮಗಾರಿಯ ಅಂದಾಜು ಮೊತ್ತ ಲಕ್ಷ್‌ಗಳಲ್ಲಿ | ಷರಾ |
|---|---|---|---|---|
| 1 | ಅಂಕಲಿ 1514005013-24-31 ಬಸಪ್ಪ ನಿಂಗಪ್ಪ ಗುಮ್ಮಗೋಳ ಮನೆಯಿಂದ ನಿಂಗಪ್ಪ ಶೆರಸೂರಿ ಮನೆವರೆಗೆ ಸಿಸಿ ರಸ್ತೆ ನಿರ್ಮಾಣ | 159351 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2. | ಗೋವನಕೊಪ್ಪ 1514005013-24-32 PWD ರಸ್ತೆಯಿಂದ ಅಂಗನವಾಡಿ ಕೇಂದ್ರದವರೆಗೆ ಸಿಸಿ ರಸ್ತೆ ನಿರ್ಮಾಣ | 233715 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 3. | 1514005013-24-36 ಗೋವನಕೊಪ್ಪ ಗ್ರಾಮದ ಲಕ್ಷ್ಮವ್ವ ಬಡಿಗೇರ ಮನೆಯಿಂದ ಚರ್ಚವರೆಗೆ ಚರಂಡಿ ನಿರ್ಮಾಣ | 178047 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 4. | 1514005013-24-50 ಕೋಗನೂರ ಗ್ರಾಮದ ಬಾಲೇಹೊಸೂರ ರಸ್ತೆಯಿಂದ ಬಸಪ್ಪ ಕಮತ ಮನೆವರೆಗೆ ಸಿಸಿ ರಸ್ತೆ ಹಾಗೂ ಸಿಡಿ ನಿರ್ಮಾಣ | 149378 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 5. | 1514005013-24-52 ಗ್ರಾಮ ಪಂಚಾಯತ ಕಟ್ಟಡದಿಂದ ಪಿಡಬ್ಲ್ಯೂಡಿ ರಸ್ತೆವರೆಗೆ ಚರಂಡಿ ನಿರ್ಮಾಣ | 116663 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 6. | 1514005013-24-21 ಕೋಗನೂರ ಗ್ರಾಮದ ಸ.ಹಿ.ಪ್ರಾ ಶಾಲೆಯ ಹಳೆ ಕಟ್ಟಡ ಕಂಪೌಂಡ್ ಗೋಡೆ ನಿರ್ಮಾಣ | 127065 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 7. | 1514005013-24-29 ನಾಗರಮಡವು ಗ್ರಾಮದ ಗಂಗಾಧರ ಸೂರಣಗಿ ಮನೆ ಹಿಂದಿನಿಂದ ಬೆಳ್ಳಟ್ಟಿ ರಸ್ತೆವರೆಗೆ ಸಿಸಿ ರಸ್ತೆ ನಿರ್ಮಾಣ | 396605 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;-28/10/2025 ರಿಂದ 06/11/2025 ರವರೆಗೆ
ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ:-28-10-2025, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;-06-11-2025
ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:-06-11-2025 ರ ಮಧ್ಯಾಹ್ನ 3.00ಗಂಟೆ

**ನಿಬಂಧನೆಗಳು**

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಕೋಗನೂರದಿಂದ ಮಾಹಿತಿ ಪಡೆಯಬಹುದಾಗಿದೆ.
2) ದರಪಟ್ಟಿಯಲ್ಲಿರುವ ಸಾಮಗ್ರಿಗಳ ಗುಣಮಟ್ಟ ಉತ್ತಮವಾಗಿರಬೇಕು.
3) ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಆದೇಶ/ನಿರ್ದೇಶನಗಳಿಗೆ ಬದ್ಧರಾಗಿರಬೇಕು.
4) ಸ್ಥಳೀಯರಿಗೆ ಮೊದಲ ಆದ್ಯತೆ ಇರುತ್ತದೆ.
5) ಸದರಿ ದರಪಟ್ಟಿಯನ್ನು ಅಗತ್ಯವಿದ್ದಲ್ಲಿ ರದ್ದುಗೊಳಿಸುವ ಅಧಿಕಾರ ಗ್ರಾಮ ಪಂಚಾಯತ ಹೊಂದಿರುತ್ತದೆ.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿ,**
**ಗ್ರಾಮ ಪಂಚಾಯತ, ಕೋಗನೂರ**

ಸಹಿ ಆಗಿದೆ/-
**ಅಧ್ಯಕ್ಷರು,**
**ಗ್ರಾಮ ಪಂಚಾಯತ, ಕೋಗನೂರ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka